ಸಂಪುಟ : ೯ ಸಂಚಿಕೆ ೮೨ ಪುಟ : ೪ ಬೆಲೆ: ೩.೦೦ ಬುಧವಾರ ಮೇ 1 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...


VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 82 Pages : 4 Price : 3.00 Wednesday May 1 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ನಮ್ಮ ಹೋರಾಟ ಮುಂದುವರೆಯಲಿದೆ

■ ವಿಜಯಸಾಕ್ಷಿ ಸುದ್ದಿ, ಗದಗ




ಕರ್ನಾಟಕ ಸರಕಾರ ಕೋರಿದ ಪರಿಹಾರದ ಪೈಕಿ ಶೇ. 20ಕ್ಕಿಂತ ಕಡಿಮೆ ಹಣವನ್ನು ಕೇಂದ್ರ ಬಿಡುಗಡೆ ಮಾಡಿದೆ. ಈ ಬಗ್ಗೆ ಸುಪ್ರಿಂಕೋರ್ಟ್‌ನಲ್ಲಿ ನಮ್ಮ ಹೋರಾಟ ಮುಂದುವರೆಸಲಾಗುವುದು. ಮೇ 5ರಂದು ಪ್ರಕರಣದ ಮತ್ತೆ ವಿಚಾರಣೆಗೆ ಬರಲಿದೆ ಎಂದು ಕಂದಾಯ ಸಚಿವ ಕೃಷ್ಣ ಭೈರೇಗೌಡ ಹೇಳಿದರು.

ತಾಲೂಕಿನ ಹುಲಕೋಟಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಸರಕಾರ 18 ಸಾವಿರ ಕೋಟಿ ರೂ. ಬರ ಪರಿಹಾರ ಕೇಳಿತ್ತು. ಆದರೆ ಕೇಂದ್ರ ಸರಕಾರ ಕೇವಲ 3400 ಕೋಟಿ ರೂ. ಬಿಡುಗಡೆ ಮಾಡಿದ್ದು, ಈ ಬಗ್ಗೆ ಕಾನೂನು ಹೋರಾಟ ಮುಂದುವರಿಸಲಾಗುವುದು. ರಾಜ್ಯ ಸರಕಾರ ಈಗಾಗಲೇ ಮೊದಲ ಕಂತಿನ ಬರ ಪರಿಹಾರವನ್ನು ರೈತರ ಖಾತೆಗೆ ಜಮಾ ಮಾಡಿದೆ. ಕೇಂದ್ರ ಸರಕಾರ ನೀಡಿದ 3400 ಕೋಟಿ ರೂ.ಗಳನ್ನು ಇನ್ನೊಂದು ವಾರದಲ್ಲಿ ರೈತರ ಖಾತೆಗೆ ಜಮೆ ಮಾಡಲಾಗುವುದು. ರೈತರಿಗೆ ಪರಿಹಾರ ವಿತರಣೆಯಲ್ಲಿ ಯಾವುದೇ ವಿಳಂಬವಾಗದಂತೆ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ತಿಳಿಸಿದರು.

ನೀತಿ ಸಂಹಿತೆ ಜಾರಿಯಲ್ಲಿದ್ದರೂ ಕೇಂದ್ರ ಪರಿಹಾರ ಕೊಟ್ಟಿದೆ ಎನ್ನುವ ಬಿಜೆಪಿ ನಾಯಕರ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ಬಿಜೆಪಿ ನಾಯಕರಿಗೆ ನಾಚಿಕೆಯಾಗಬೇಕು. ಕಳೆದ ವರ್ಷ ಸಪ್ಟೆಂಬರ್‌ನಲ್ಲಿ ಬರ ಪರಿಹಾರ ಕೋರಿದ್ದೆವು. 7 ತಿಂಗಳಾದರೂ ಹಣ ಬಿಡುಗಡೆ ಮಾಡದೆ, ಈಗ ಕೊಟ್ಟಿರುವ ಅಲ್ಪ ಹಣದ ಬಗ್ಗೆ ಅಭಿಮಾನ ವ್ಯಕ್ತಪಡಿಸುವುದು ಸರಿಯಲ್ಲ ಎಂದು ವಾಗ್ದಾಳಿ ನಡೆಸಿದರು.

## ಸಚಿವರೊಂದಿಗೆ ಕಾರ್ಯಕ್ರಮ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ



ದ.ಸಂ.ಸ ಒಕ್ಕೂಟ, ಕರ್ನಾಟಕ ರಾಜ್ಯ ರೈತ ಸಂಘ, ದಲಿತ ಕಲಾ ಮಂಡಳಿ, ಜಾಗೃತ ಕರ್ನಾಟಕ ವತಿಯಿಂದ ಗದುಗಿನ ಕೆ.ಎಚ್. ಪಾಟೀಲ ಸಭಾಭವನದಲ್ಲಿ ತೆರಿಗೆ ಅನುದಾನ ಮತ್ತು ಬರಪರಿಹಾರದ ವಿಷಯದಲ್ಲಿ ಕರ್ನಾಟಕಕ್ಕೆ ಆಗುತ್ತಿರುವ ಅನ್ಯಾಯದ ಕುರಿತು ಮೇ 2ರಂದು ಬೆಳಿಗ್ಗೆ 10.30ಕ್ಕೆ ಕಾರ್ಯಕ್ರಮ ನಡೆಯಲಿದೆ. ಈ ಕಾರ್ಯಕ್ರಮದಲ್ಲಿ ಕಂದಾಯ ಸಚಿವ ಕೃಷ್ಣ ಬೈರೇಗೌಡ ಭಾಗವಹಿಸಲಿದ್ದಾರೆ. ತೆರಿಗೆ, ನೀರಾವರಿ, ಬರ ಪರಿಹಾರ ವಿಷಯದಲ್ಲಿ ಕರ್ನಾಟಕಕ್ಕೆ ಆಗಿರುವ ದ್ರೋಹ/ವಂಚನೆ ಏನು ಎಂಬ ವಿಚಾರವಾಗಿ ಈ ಕಾರ್ಯಕ್ರಮ ನಡೆಯಲಿದೆ ಎಂದು ಜಾಗೃತ ಕರ್ನಾಟಕದ ರಾಜಶೇಖರ್ ಅಕ್ಕಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರಜ್ವಲ್ ಪ್ರಕರಣ ನೈತಿಕ ಅಧಃಪತನದ ಪರಮಾವಧಿ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ಹಾಸನದ ಪ್ರಜ್ವಲ್ ರೇವಣ್ಣ ಲೈಂಗಿಕ ದೌರ್ಜನ್ಯದ ಪೆನ್‌ಡ್ರೈವ್ ಪ್ರಕರಣದಿಂದ ರಾಜ್ಯವು ದೇಶದ ಮುಂದೆ ತಲೆತಗ್ಗಿಸುವಂತೆ ಮಾಡಿದೆ. ಇಂತಹ ವಿಕೃತಿ ಹೊಂದಿರುವವರು ಜನ ಪ್ರತಿನಿಧಿಯಾಗಿರುವುದು ಸಂಸತ್ತಿನ ಇತಿಹಾಸಕ್ಕೆ ಕಪ್ಪು ಚುಕ್ಕೆ. ನೈತಿಕ ಅಧಃಪತನದ ಪರಮಾವಧಿಯಾಗಿದೆ ಎಂದು ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ ರಾಜ್ಯಾಧ್ಯಕ್ಷ ಅಡ್ವೋಕೇಟ್ ತಾಹೇರ್ ಹುಸೇನ್ ಅಭಿಪ್ರಾಯಪಟ್ಟಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಸಂತ್ರಸ್ತ ಮಹಿಳೆಯರು ಪ್ರಜ್ವಲ್ ಜೊತೆಗೆ ರೇವಣ್ಣನವರ ಮೇಲೆಯೂ ಆರೋಪ ಹೊರಿಸುತ್ತಿದ್ದಾರೆ. ಈ ಬಗ್ಗೆ ಸಮಗ್ರ ತನಿಖೆ ನಡೆಯಬೇಕು. ಭುಗಿಲೆದ್ದ ಪ್ರತಿಭಟನೆಗಳಿಂದ ಪಾರಾಗಲು ಕಾಟಾಚಾರದ ತನಿಖೆಯಾಗಬಾರದು. ಹೆಣ್ಣುಮಕ್ಕಳ ಅಸಹಾಯಕತೆಯನ್ನು ದುರುಪಯೋಗಪಡಿಸಿ ಲೈಂಗಿಕ ದೌರ್ಜನ್ಯವೆಸಗಿದ ಆರೋಪದ ಸತ್ಯಾಸತ್ಯತೆ ಹೊರ ಬರಲೇಬೇಕು. ತಪ್ಪು ಮಾಡಿ ವಿದೇಶಕ್ಕೆ ಪಲಾಯನ ಮಾಡುವುದು ಇಂದು ಸಾಮಾನ್ಯವಾಗಿದೆ. ಈ ವಿದೇಶ ಪಲಾಯನದಲ್ಲಿ ಯಾರದ್ದಾದರೂ ಪ್ರಭಾವ ಇದೆಯೇ ಎಂಬ ಕುರಿತೂ ತನಿಖೆಯಾಗಬೇಕಾಗಿದೆ ಎಂದು ಅವರು ಹೇಳಿದ್ದಾರೆ.

### ಸಂವಾದ ಕಾರ್ಯಕ್ರಮದಲ್ಲಿ ಪ್ರಧಾನಿ ಮೋದಿ ವಿರುದ್ಧ ವಾಗ್ದಾಳಿ ನಡೆಸಿದ ನಟ ಪ್ರಕಾಶ್ ರಾಜ್

# ಪ್ರಜಾಪ್ರಭುತ್ವ ಜಾಗೃತಿ ನನ್ನ ಕರ್ತವ್ಯ

■ ವಿಜಯಸಾಕ್ಷಿ ಸುದ್ದಿ, ಗದಗ

ದೇಶದಲ್ಲಿ ಮಹಾಪ್ರಭುಗಳೊಬ್ಬರು ಓಡಾಡುತ್ತಿದ್ದಾರೆ. ಕಳೆದ 10 ವರ್ಷಗಳಿಂದ ಆಡಳಿತ ನಡೆಸುತ್ತಿದ್ದಾರೆ. ಆದರೆ ಅವರನ್ನು ಯಾರೂ ಪ್ರಶ್ನಿಸುವಂತಿಲ್ಲ. ಅವರನ್ನು ಪ್ರಶ್ನಿಸಿದರೆ ದೇಶದ್ರೋಹಿ, ಹಿಂದೂ ವಿರೋಧಿ ಎಂಬ ಪಟ್ಟ ಕಟ್ಟಲಾಗುತ್ತಿದೆ ಎಂದು ಚಿತ್ರನಟ ಪ್ರಕಾಶ್ ರಾಜ್ ಪ್ರಧಾನಿ ನರೇಂದ್ರ ಮೋದಿ ವಿರುದ್ಧ ವಾಗ್ದಾಳಿ ನಡೆಸಿದರು.

ಮಂಗಳವಾರ ಗದುಗಿನ ಖಾಸಗಿ ಹೋಟೆಲ್ ಒಂದರಲ್ಲಿ ನಡೆದ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಭ್ರಷ್ಟಾಚಾರವನ್ನು ಬುಡಸಮೇತ ಕಿತ್ತು ಹಾಕುತ್ತೇವೆ ಎಂದವರೇ ಇಂದು ಭ್ರಷ್ಟಾಚಾರಿಗಳನ್ನು ತಮ್ಮ ಪಕ್ಷಕ್ಕೆ ಸೇರಿಸಿಕೊಂಡಿದ್ದಾರೆ. ಬೇಟಿ ಬಚಾವೋ ಬೇಟಿ ಪಡಾವೋ ಎನ್ನುತ್ತಲೇ ಅತ್ಯಾಚಾರಿಗಳನ್ನು ಬೆಂಬಲಿಸುತ್ತಿದ್ದಾರೆ ಎಂದು ಪ್ರಕಾಶ್ ರಾಜ್ ಕಿಡಿ ಕಾರಿದರು.

ನಾವು ಮಹಾಪ್ರಭುವನ್ನು ಆರಿಸಿದ್ದು ಮಂದಿರ ಕಟ್ಟುವುದಕ್ಕಲ್ಲ. ಆದರೂ ಮಂದಿರ ಕಟ್ಟಿದರು. ಕಟ್ಟಿಸಲಿ, ತೊಂದರೆಯಿಲ್ಲ. ಆದರೆ, ಯುವಕರಿಗೆ ನೀಡಿದ್ದ




ಉದ್ಯೋಗ ಭರವಸೆ ಏನಾಯಿತು? ನೀವು ಬೇಕಾದರೆ ಚಹಾ ಮಾರಿ, ಆದರೆ ವಿದ್ಯಾವಂತ ಯುವಕರು ಏಕೆ ಪಕೋಡಾ ಮಾರಬೇಕು? 100 ಸ್ಮಾರ್ಟ್ ಸಿಟಿಗಳು ಏನಾದವು, ಸಂಸದರ ಆದರ್ಶ ಗ್ರಾಮಗಳು ಎಲ್ಲಿವೆ, ರೈತರ ಆದಾಯ ದ್ವಿಗುಣ ಏನಾಯಿತು ಎನ್ನುವ ಬಗ್ಗೆ ಜನ ಸಮುದಾಯ ಪ್ರಶ್ನೆ ಮಾಡಬೇಕು ಎಂದರು.

ನನ್ನ ತಾಯಿಯ ಊರು ಗದಗ. ಬಾಲ್ಯದಲ್ಲಿ ನಾನು ಇಲ್ಲಿಗೆ ಭೇಟಿ ನೀಡಿದ್ದೆ. ಮುಂದೆ ನನ್ನ ತಾಯಿ ಬೆಂಗಳೂರು ಸೇರಿದರು. ನಾನು ಅಲ್ಲಿಯೇ ಹುಟ್ಟಿ ಬೆಳೆದೆ. ಆದರೆ ಈಗಲೂ ನನ್ನ ತಾಯಿಯ ಸಂಬಂಧಿಕರು ಈ ಭಾಗದಲ್ಲಿ ಇದ್ದಾರೆ. ಇಲ್ಲಿಗೆ ಭೇಟಿ ನೀಡುತ್ತಿದ್ದಂತೆ ಹಳೆಯ ನೆನಪುಗಳು ಹಸಿರಾದವು ಎಂದು ಮಾತು ಆರಂಭಿಸಿದ ಪ್ರಕಾಶ್ ರಾಜ್, ಮಾತಿನುದ್ದಕ್ಕೂ ಉತ್ತರ ಕರ್ನಾಟಕ ಭಾಷೆಯಲ್ಲಿಯೇ ಪ್ರಧಾನಿ ನರೇಂದ್ರ ಮೋದಿ ಅವರನ್ನು 'ಮಹಾಪ್ರಭು' ಎಂದು ಕರೆಯುತ್ತಲೇ ವಾಗ್ದಾಳಿ ನಡೆಸಿದರು.

ಈ ಸಂದರ್ಭದಲ್ಲಿ ಸಾಹಿತಿ ಬಸವರಾಜ ಸೂಳಿಭಾವಿ, ಅಶೋಕ ಬರಗುಂಡಿ, ಮುತ್ತು ಬಿಳಿಯಲಿ ಮುಂತಾದವರು ಉಪಸ್ಥಿತರಿದ್ದರು.

> ನಾನೊಬ್ಬ ನಟನಾಗಿ ಸಮಾಜದಿಂದ ಪಡೆದ ಗೌರವಾದರಗಳನ್ನು ಮರಳಿಸುವ ಉದ್ದೇಶದಿಂದ ಪ್ರಜಾಪ್ರಭುತ್ವ ಜಾಗೃತಿ ನನ್ನ ಕರ್ತವ್ಯವಾಗಿದೆ. ಜನಸಮುದಾಯ ಯಾವತ್ತಿಗೂ ಒಂದು ವಿರೋಧ ಪಕ್ಷವೇ. ಆ ಪಕ್ಷದ ಪರವಾಗಿ ನಾನು ನಿರಂತರವಾಗಿ ಕೆಲಸ ಮಾಡುತ್ತೇನೆ. ಜನರಲ್ಲಿ ರಾಜಕೀಯ ಜಾಗೃತಿಗಾಗಿ ರಾಜ್ಯಾದ್ಯಂತ ಪ್ರವಾಸ ಮಾಡುತ್ತಿದ್ದೇನೆ ಎಂದು ಪ್ರಕಾಶ್ ರಾಜ್ ಹೇಳಿದರು.

### ಜಕ್ಕಲಿಯ ಭುವನೇಶ್ವರಿ ರಂಗಮಂದಿರದಲ್ಲಿ ನಡೆದ ಚುನಾವಣಾ ಪ್ರಚಾರ ಸಭೆಯಲ್ಲಿ ಜಿ.ಎಸ್. ಪಾಟೀಲ

# ಒಡೆದು ಆಳುವ ಸರ್ಕಾರವನ್ನು ತಿರಸ್ಕರಿಸಿ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ದೇಶದಲ್ಲಿ ಬಿಜೆಪಿ ಎಂದಿಗೂ ಒಡೆದಾಡುವ ನೀತಿಯನ್ನು ಅನುಸರಿಸುತ್ತಿದೆ. ಇಂತಹ ಬಿಜೆಪಿಯನ್ನು ಈ ಲೋಕಸಭಾ ಚುನಾವಣೆಯಲ್ಲಿ ತಿರಸ್ಕರಿಸಿ ಮತದಾರರು ನುಡಿದಂತೆ ನಡೆವ ಪಕ್ಷವಾದ ಕಾಂಗ್ರೆಸ್‌ನ ಇಂಡಿಯಾ ಒಕ್ಕೂಟಕ್ಕೆ ಬೆಂಬಲ ನೀಡಬೇಕೆಂದು ರೋಣ ಶಾಸಕ, ಗದಗ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಜಿ.ಎಸ್. ಪಾಟೀಲ ಹೇಳಿದರು.

ಸಮೀಪದ ಜಕ್ಕಲಿಯ ಭುವನೇಶ್ವರಿ ರಂಗ ಮಂದಿರದಲ್ಲಿ ನಡೆದ ಚುನಾವಣಾ ಪ್ರಚಾರ ಸಭೆಯಲ್ಲಿ ಅವರು ಮಾತನಾಡಿದರು.

ಮಾತೆತ್ತಿದರೆ ಬಿಜೆಪಿಯವರು ಸಂವಿಧಾನ ಬದಲಿಸುತ್ತೇವೆ ಎನ್ನುತ್ತಾರೆ. ಸರ್ವರಿಗೂ ಸಮ ಬಾಳು, ಸರ್ವರಿಗೂ ಸಮಪಾಲು ಎನ್ನುವ ಸಿದ್ಧಾಂತದ ಮೇಲೆ ಡಾ. ಬಾಬಾ ಸಾಹೇಬ ಅಂಬೇಡ್ಕರರು ಸಂವಿಧಾನ ರಚಿಸಿ, ಈ ದೇಶದಲ್ಲಿ ಎಲ್ಲರೂ ನೆಮ್ಮದಿಯಿಂದ ಬದುಕುವಂತೆ ಮಾಡಿರುವುದು ಇವರಿಗೆ ಬೇಡವಾಗಿದೆ. ಈ ಮಾತನ್ನು ಎಂದಿನಿಂದಲೂ ಹೇಳುತ್ತ ಬಂದಿದ್ದ ಸಂಸದ ಅನಂತಕುಮಾರ ಹೆಗಡೆಯವರ ಬಾಯಿ ಮುಚ್ಚಿಸುವುದು ಇವರಿಂದ ಸಾಧ್ಯವಾಗಲಿಲ್ಲ. ಚುನಾವಣೆ ಬಂದಾಗ ಅವರಿಗೆ ಟಿಕೆಟ್ ಕೊಡದೆ ಮತ ಪಡೆಯುವ ಯತ್ನವನ್ನು ಬಿಜೆಪಿ ಮಾಡುತ್ತಿದ್ದು, ಇದನ್ನು ದೂರವಿಡಲು ನೀವು




ಸಿದ್ಧರಾಗಬೇಕೆಂದು ಪಾಟೀಲ ಹೇಳಿದರು.

ಮುಖಂಡ ಸಿದ್ದಣ್ಣ ಬಂಡಿ ಮಾತನಾಡಿ, ಕೇಂದ್ರದಲ್ಲಿ ಅಧಿಕಾರದಲ್ಲಿರುವ ಬಿಜೆಪಿ ಸರಕಾರ ಮತ್ತು ರಾಜ್ಯದಲ್ಲಿ ಅಧಿಕಾರದಲ್ಲಿದ್ದ ಬಿಜೆಪಿ ಸರಕಾರದ ಸಾಧನೆಗಳ ಬಗ್ಗೆ ಎಲ್ಲರಿಗೂ ತಿಳಿದಿದೆ. ಈ ಲೋಕಸಭಾ ಚುನಾವಣೆಯಲ್ಲಿಯೂ ಸಹ ಕೇಂದ್ರದಲ್ಲಿ ಕಾಂಗ್ರೆಸ್ ನೇತೃತ್ವದ ಮೈತ್ರಿಕೂಟವನ್ನು ಅಧಿಕಾರಕ್ಕೆ ತಂದರೆ 25 ಗ್ಯಾರಂಟಿಗಳು ನಿಮ್ಮದಾಗುತ್ತವೆ. ಇದರಿಂದ ನೀವು ನೆಮ್ಮದಿಯ ಬದುಕನ್ನು ಬಾಳಬಹುದು ಎಂದರು.

ಚನ್ನಬಸಪ್ಪ ದೊಡ್ಡಮೇಟಿ, ಎಂ.ಎಸ್. ದಢೇಸೂರಮಠ, ಎಸ್.ಎಸ್. ಸೋಂಪೂರ, ಮಲ್ಲಣ್ಣ ಮೇಟಿ ಮುಂತಾದವರು ಮಾತನಾಡಿದರು. ಶರಣಪ್ಪ ಪಟ್ಟಣಶೆಟ್ಟಿ ಅಧ್ಯಕ್ಷತೆ ವಹಿಸಿದ್ದರು.

> ಬಿಜೆಪಿಯವರಿಗೆ ಸೋಲಿನ ವಾಸನೆ ಬಡಿದಿದೆ. ಅದಕ್ಕಾಗಿ ಪ್ರಧಾನಿ ನರೇಂದ್ರ ಮೋದಿಯವರು ಇನ್ನಿಲ್ಲದ ಕಸರತ್ತು ಮಾಡುತ್ತ ಒಬ್ಬ ಪ್ರಧಾನಿಯಂತೆ ನಡೆದುಕೊಳ್ಳದೆ ಸಾಮಾನ್ಯನಂತೆ ನಡೆದುಕೊಳ್ಳುತ್ತಿದ್ದಾರೆ. ಇದು ಅವರ ಘನತೆಗೆ ಸೂಕ್ತವಲ್ಲ. ಕಾಂಗ್ರೆಸ್ ಬಗ್ಗೆ ಸಲ್ಲದ ಮಾತುಗಳನ್ನಾಡುತ್ತ ಜನರನ್ನು ತಪ್ಪು ದಾರಿಗೆಳೆಯಲು ಪ್ರಯತ್ನಿಸುತ್ತಿದ್ದಾರೆ. ಪ್ರಜ್ಞಾವಂತರು ದಾರಿ ತಪ್ಪದೆ ಕಾಂಗ್ರೆಸ್‌ಗೆ ಮತ ನೀಡಿ ನುಡಿದಂತೆ ನಡೆದ ಸರಕಾರವನ್ನು ಬೆಂಬಲಿಸಿ ಎಂದು ಶಾಸಕ ಜಿ.ಎಸ್. ಪಾಟೀಲ ಕರೆ ನೀಡಿದರು.

ವೇದಿಕೆಯಲ್ಲಿ ಧುರೀಣರಾದ ಐ.ಎಸ್. ಪಾಟೀಲ, ವಿ.ಬಿ. ಸೋಮನಕಟ್ಟಿಮಠ, ಶರಣಪ್ಪ ಬೆಟಗೇರಿ, ಪರಶುರಾಮ ಅಳಗವಾಡಿ, ಅಕ್ಷಯ ಪಾಟೀಲ, ಬಸವರಾಜ ನವಲಗುಂದ, ಯೂಸೂಫ್ ಇಟಗಿ, ಅಶೋಕಪ್ಪ ಯಾವಗಲ್ಲ, ಪ್ರಕಾಶ ಹೊಸಮನಿ, ಸುಭಾಸ ಕೆಳಗಡೆ, ವೀರಪ್ಪ ಅಕ್ಕಿಶೆಟ್ಟರ, ಫಕೀರಪ್ಪ ಮಾದರ, ಶಿವರಾಜ ಮುಗಳಿ, ರಮೇಶ ಪಲ್ಲೇದ, ಗುರಪ್ಪ ರೋಣದ, ಸಂತೋಷ ಕೋರಿ, ಅನ್ನಪೂರ್ಣಾ ಮುಗಳಿ, ಸುವರ್ಣಾ ತಳವಾರ, ಬೀಬಿಜಾನ ಕದಡಿ, ಅಂದಪ್ಪ ಹೂಗಾರ, ಹನಮಪ್ಪ ಜಂಗಣ್ಣವರ, ಚನ್ನಬಸವ ಅರಹುಣಸಿ, ರಸೂಲಸಾಬ ಗಡಾದ, ವೀರಭದ್ರಪ್ಪ ಗಾಣಿಗೇರ, ಯಮನೂರಸಾಬ ನದಾಫ್, ಸಂದೇಶ ದೊಡ್ಡಮೇಟಿ ಮುಂತಾದವರಿದ್ದರು. ರವೀಂದ್ರ ಮುಗಳಿ ನಿರ್ವಹಿಸಿದರು.

### ಮೋದಿಯವರನ್ನು ಮೂರನೇ ಬಾರಿ ಪಿಎಂ ಮಾಡಿದರೆ, ಭಾರತವನ್ನು ವಿಶ್ವದ ಮೂರನೇ ಆರ್ಥಿಕ ಶಕ್ತಿಯಾಗಿ ಮಾಡುತ್ತಾರೆ; ಜೆ.ಪಿ. ನಡ್ಡಾ

# ಮೋದಿಯವರ ವಿಕಸಿತ ಭಾರತ ಸಾಕಾರಗೊಳಿಸಲು ಬೊಮ್ಮಾಯಿ ಗೆಲ್ಲಿಸಿ

■ ವಿಜಯಸಾಕ್ಷಿ ಸುದ್ದಿ, ಹಾವೇರಿ

ಪ್ರಧಾನಿ ನರೇಂದ್ರ ಮೋದಿಯವರ ವಿಕಸಿತ ಭಾರತದ ಕನಸು ಸಾಕಾರಗೊಳಿಸಲು ಹಾವೇರಿ– ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿಯವರನ್ನು ಗೆಲ್ಲಿಸಿ ಎಂದು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ ನಡ್ಡಾ ಕರೆ ನೀಡಿದ್ದಾರೆ.

ಅವರು ಮಂಗಳವಾರ ಬ್ಯಾಡಗಿಯಲ್ಲಿ ಬಸವರಾಜ ಬೊಮ್ಮಾಯಿಯವರ ಪರವಾಗಿ ರೋಡ್ ಶೋ ನಡೆಸಿ ಮಾತನಾಡಿದರು. ನಿಮ್ಮ ಉತ್ಸಾಹ ನೋಡಿದರೆ ಬೊಮ್ಮಾಯಿಯವರನ್ನು ಸಂಸತ್ ಸದಸ್ಯರನ್ನಾಗಿ ಮಾಡುವ ತೀರ್ಮಾನ ಮಾಡಿದ್ದೀರಿ. ಇದು ಬೊಮ್ಮಾಯಿಯವರ ಚುನಾವಣೆಯಲ್ಲ. ಮೋದಿಯವರು ವಿಕಸಿತ ಭಾರತ ಮಾಡಲು ಚುನಾವಣೆ ನಡೆಯುತ್ತಿದೆ. ಅವರನ್ನು ಅತಿ ಹೆಚ್ಚು ಮತಗಳ ಅಂತರದಿಂದ ಗೆಲ್ಲಿಸಿ ಕಳುಹಿಸುವಂತೆ ಮನವಿ ಮಾಡಿದರು.



ಮೋದಿಯವರು ನಿಮಗೆ ಕಿಸಾನ್ ಸಮ್ಮಾನ್ ನೀಡಿದ್ದಾರಲ್ವಾ, ಉಜ್ವಲ ಗ್ಯಾಸ್ ನೀಡಿದ್ದಾರಲ್ವಾ, ನೀರು ನೀಡಿದ್ದಾರಲ್ವಾ, ಮೋದಿ ಭಾರತವನ್ನು ಆರ್ಥಿಕತೆಯಲ್ಲಿ ವಿಶ್ವದ ಐದನೇ ಸ್ಥಾನಕ್ಕೆ ತಂದು ನಿಲ್ಲಿಸಿದ್ದಾರೆ. ಅವರನ್ನು ಮೂರನೇ ಬಾರಿ ಪ್ರಧಾನಿ ಮಾಡಿದರೆ ಭಾರತವನ್ನು ವಿಶ್ವದ ಮೂರನೇ ಆರ್ಥಿಕ ಶಕ್ತಿಯಾಗಿ ಮಾಡುತ್ತಾರೆ ಎಂದರು.

ಕಾಂಗ್ರೆಸ್ ಅಂದರೆ ಭ್ರಷ್ಟಾಚಾರ, ಇಂಡಿಯಾ ಒಕ್ಕೂಟ ಭ್ರಷ್ಟಾಚಾರಿಗಳ ಕೂಟವಾಗಿದೆ. ಕಾಂಗ್ರೆಸ್ ಯಾವಾಗಲೂ ಭ್ರಷ್ಟಾಚಾರಿಗಳನ್ನು ರಕ್ಷಣೆ ಮಾಡುತ್ತ ಬಂದಿದೆ. ಅಗಸ್ಟಾ ವೆಸ್ಟ್ ಲ್ಯಾಂಡ್ ಹಗರಣ, ಅಕ್ಕಿ ಹಗರಣ, 2ಜಿ ಹಗರಣ, ಮಮತಾ, ಅಖಿಲೇಶ್ ಯಾದವ್ ಡಿಎಂಕೆ ನಾಯಕರು ಎಲ್ಲರೂ ಭ್ರಷ್ಟಾಚಾರ ಮಾಡಿದ್ದಾರೆ. ಡಿ.ಕೆ. ಶಿವಕುಮಾರ್ ಕೂಡ ಭ್ರಷ್ಟಾಚಾರ ಮಾಡಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಮಾಜಿ ಸಿಎಂ ಹಾಗೂ ಹಾವೇರಿ ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ, ಪ್ರತಿಪಕ್ಷದ ನಾಯಕ ಆರ್. ಅಶೋಕ್, ಮಾಜಿ ಸಚಿವ ಬಿ.ಸಿ.ಪಾಟೀಲ್ ಪಾಲ್ಗೊಂಡಿದ್ದರು. ಇದಕ್ಕೂ ಮೊದಲು ಜೆ.ಪಿ.ನಡ್ಡಾ ಅವರು, ಕಾಗಿನೆಲೆ ಗುರು ಪೀಠಕ್ಕೆ ಭೇಟಿ ನೀಡಿ, ಗುರುಪೀಠದ ಪೀಠಾಧ್ಯಕ್ಷರಾದ ಶ್ರೀ ನಿರಂಜನಾನಂದಪುರಿ ಸ್ವಾಮೀಜಿಯವರನ್ನು ಭೇಟಿ ಮಾಡಿ ಆಶೀರ್ವಾದ ಪಡೆದುಕೊಂಡರು.

## ಬೇಲ್ ಮೇಲೆ ನಾಯಕರು

ಇಂಡಿಯಾ ಒಕ್ಕೂಟದ ಬಹುತೇಕ ನಾಯಕರು ಬೇಲ್ ಮೇಲೆ ಇದ್ದಾರೆ. ಕಾಂಗ್ರೆಸ್ ನಾಯಕಿ ಸೊನಿಯಾ ಗಾಂಧಿ, ರಾಹುಲ್ ಗಾಂಧಿ, ಕಾರ್ತಿ ಚಿದಂಬರ್, ಲಾಲು ಪ್ರಸಾದ್, ಡಿಕೆ ಶಿವಕುಮಾರ್ ಎಲ್ಲರೂ ಬೇಲ್ ಮೇಲೆ ಇದ್ದಾರೆ. ಅರವಿಂದ ಕೇಜ್ರಿವಾಲ್ ಜೈಲಿನಲ್ಲಿದ್ದಾರೆ. ಇಂತಹ ನಾಯಕರು ನಮಗೆ ಬೇಕಾ ಎಂದು ಪ್ರಶ್ನಿಸಿದರು.

ಈ ಬಾರಿ ಕೇಂದ್ರದಲ್ಲಿ 400 ಕ್ಕೂ ಹೆಚ್ಚು ಸ್ಥಾನ ಗೆಲ್ಲಲು ಮೋದಿಯವರನ್ನು ಮತ್ತೆ ಪ್ರಧಾನಿ ಮಾಡಲು ಎಲ್ಲರೂ ಬಿಜೆಪಿಗೆ ಮತ ಹಾಕಿ ಬಸವರಾಜ ಬೊಮ್ಮಾಯಿಯವರನ್ನು ಸಂಸದರನ್ನಾಗಿ ಮಾಡಿ ದೆಹಲಿಗೆ ಕಳುಹಿಸಿ ಎಂದು ಮನವಿ ಮಾಡಿದರು.

## ಬೀದಿ ಬದಿ ವ್ಯಾಪಾರಸ್ಥರ ಮತಯಾಚಿಸಿದ ಗಡ್ಡದೇವರಮಠ



■ವಿಜಯಸಾಕ್ಷಿ ಸುದ್ದಿ, ಹಾವೇರಿ

ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಬೀದಿ ಬದಿಯ ವ್ಯಾಪಾರಸ್ಥರ ಸಂಘದ ಪದಾಧಿಕಾರಿಗಳ ಬಳಿ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಮತಯಾಚಿಸಿದರು.

ಲೋಕಸಭೆ ಚುನಾವಣೆಯಲ್ಲಿ ಬಿಜೆಪಿಗೆ ಸೋಲಿನ ರುಚಿ ತೋರಿಸಬೇಕಿದೆ. ಪ್ರತಿಯೊಬ್ಬರೂ ಜಾಗೃತರಾಗಿ ಕಾಂಗ್ರೆಸ್ ಪಕ್ಷಕ್ಕೆ ಬೆಂಬಲ ನೀಡಿ, ಕೆಲವೇ ಕೆಲವು ಶ್ರೀಮಂತರ ಪರವಾಗಿ ನಿಂತಿರುವ ಬಿಜೆಪಿಗೆ ಪಾಠ ಕಲಿಸಿ ಎಂದು ಮನವಿ ಮಾಡಿದರು.

ಬರಿ ಕೋಮುಗಲಭೆ, ಸುಳ್ಳು ಭರವಸೆಗಳ ಮೂಲಕ ದೇಶದ ಜನರ ಆಶೋತ್ತರಗಳನ್ನು ಗಾಳಿಗೆ ತೂರಿರುವ ಬಿಜೆಪಿಯ ಸುಳ್ಳಿನ ಸರದಾರರನ್ನು ಈ ಬಾರಿ ಮನೆಗೆ ಕಳಿಸಿ ಕಾಂಗ್ರೆಸ್ ಪಕ್ಷವನ್ನು ನಿಶ್ಚಯವಾಗಿ ಅಧಿಕಾರಕ್ಕೆ ತರಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ವಿಧಾನ ಪರಿಷತ್ ಮುಖ್ಯ ಸಚೇತಕ ಸಲೀಂ ಅಹ್ಮದ್, ರಾಜ್ಯದಲ್ಲಿ ಬರಗಾಲ ಆವರಿಸಿ ಜನರು ಪರದಾಡುವ ಪರಿಸ್ಥಿತಿ ಉಂಟಾದ ಸಂಕಷ್ಟ ಕಾಲದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಜಾರಿಗೊಳಿಸಿದ ಪಂಚ ಗ್ಯಾರಂಟಿ ಯೋಜನೆಗಳು ಆಸರೆಯಾಗಿವೆ. ಆದರೆ ಬರ ಪರಿಹಾರವನ್ನೂ ನೀಡದೇ ಸತಾಯಿಸಿದ ಕೇಂದ್ರ ಬಿಜೆಪಿ ಸರಕಾರದ ಆಡಳಿತವನ್ನು ಈಗ ಜನರೇ ತಿರಸ್ಕರಿಸಲು ನಿರ್ಧರಿಸಿರುವುದು ಎಲ್ಲೆಡೆ ಕಂಡು ಬರುತ್ತಿದೆ. ಹೀಗಾಗಿ ಈ ಸಲ ಕಾಂಗ್ರೆಸ್ ಗೆಲುವು ಖಚಿತ ಎಂದು ವಿಶ್ವಾಸ ವ್ಯಕ್ತಪಡಿಸಿದ ಅವರು, ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠರಿಗೆ ಮತನೀಡಿ ಬೆಂಬಲಿಸಿ ಎಂದು ಮನವಿ ಮಾಡಿದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಸಂಜೀವಕುಮಾರ ನೀರಲಗಿ, ಪ್ರಕಾಶಗೌಡ ಪಾಟೀಲ, ನಿರಂಜನ ಹಿರೇಮಠ, ಅಬ್ದುಲ್ ಜಮಾದಾರ್, ಎಸ್.ಎಸ್.ಖಾಜಿ, ವೀರಣ್ಣ ಪಾಟೀಲ, ಅಂದಾನಿಗೌಡ ಗುಡ್ಡನಗೌಡ್ರ ಉಪಸ್ಥಿತರಿದ್ದರು.

## ಪ್ರಜ್ವಲ್ ರೇವಣ್ಣ ಲೈಂಗಿಕ ಹಗರಣ: 'ನರೇಂದ್ರ ಮೋದಿಗೆ ಸತ್ಯ ಗೊತ್ತಿತ್ತು..' ಎಂದ ಓವೈಸಿ

■ವಿಜಯಸಾಕ್ಷಿ ಸುದ್ದಿ, ಹೈದರಾಬಾದ್



ಬಿಜೆಪಿ ಮಿತ್ರಪಕ್ಷವಾದ ಜೆಡಿಎಸ್‌ನ ಲೋಕಸಭಾ ಸಂಸದ ಪ್ರಜ್ವಲ್ ರೇವಣ್ಣ ಅವರ ಸೆಕ್ಸ್ ಟೇಪ್ ವಿವಾದಕ್ಕೆ ಸಂಬಂಧಿಸಿದಂತೆ ಎಐಎಂಐಎಂ ಅಧ್ಯಕ್ಷ ಅಸಾದುದ್ದೀನ್ ಓವೈಸಿ ಸೋಮವಾರ ಪ್ರಧಾನಿ ನರೇಂದ್ರ ಮೋದಿ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು. ಹೈದರಾಬಾದ್‌ನಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, "ಪ್ರಜ್ವಲ್ ರೇವಣ್ಣ ಅವರ ದುಷ್ಕೃತ್ಯಗಳ ಬಗ್ಗೆ ಪ್ರಧಾನಿ ಮೋದಿ ಅವರಿಗೆ ತಿಳಿದಿತ್ತು, ಅವರ ಪರ ಪ್ರಚಾರ ಮಾಡುತ್ತಿದ್ದಾರೆ" ಎಂದು ಆರೋಪಿಸಿದರು.

"ನರೇಂದ್ರ ಮೋದಿ ಈಗ ಮಹಿಳಾ ಸಬಲೀಕರಣದ ಬಗ್ಗೆ ಮಾತನಾಡುತ್ತಿದ್ದಾರೆ. ನರೇಂದ್ರ ಮೋದಿ ಅವರು ಮುಸ್ಲಿಂ ಮಹಿಳೆಯರ ಸಹೋದರ ಎಂದು ಹೇಳುತ್ತಿದ್ದಾರೆ. ನಿಮ್ಮಂತಹ ಸಹೋದರ ನಮಗೆ ಅಗತ್ಯವಿಲ್ಲ" ಎಂದು ಹೇಳಿದರು.

ಮಾಜಿ ಪ್ರಧಾನಿ, ಪಕ್ಷದ ಅಧ್ಯಕ್ಷ ಹೆಚ್ ಡಿ ದೇವೇಗೌಡರ ಮೊಮ್ಮಗನೂ ಆಗಿರುವ ಜೆಡಿಎಸ್ ಸಂಸದ ಪ್ರಜ್ವಲ್ ರೇವಣ್ಣ ಅವರು ಸೆಕ್ಸ್ ಟೇಪ್ ಹಗರಣದಲ್ಲಿ ಸಿಲುಕಿದ್ದಾರೆ ಮತ್ತು ಅವರು ದೇಶವನ್ನು ತೊರೆದು ಜರ್ಮನಿಗೆ ಹೋಗಿದ್ದಾರೆ ಎನ್ನಲಾಗುತ್ತಿದೆ.

ಪ್ರಜ್ವಲ್ ರೇವಣ್ಣ ಅವರ ಲೈಂಗಿಕ ದೌರ್ಜನ್ಯದ ವೀಡಿಯೊಗಳನ್ನು ಹೊಂದಿರುವ ಸಾವಿರಾರು ಪೆನ್ ಡ್ರೈವ್‌ಗಳು ಹಾಸನದಲ್ಲಿ ಹಂಚಲಾಗಿದ್ದು, 33 ವರ್ಷದ ಜೆಡಿಎಸ್ ನಾಯಕ ಅಲ್ಲಿಂದ ಮತ್ತೊಂದು ಅವಧಿಗೆ ಪ್ರಯತ್ನಿಸುತ್ತಿದ್ದಾರೆ. ಕರ್ನಾಟಕ ಪೊಲೀಸರ ಪ್ರಕಾರ ಹಾಸನದಲ್ಲಿ ಕೆಲವು ಸೆಕೆಂಡುಗಳಿಂದ ನಿಮಿಷಗಳ ಅವಧಿಯ 2,976 ವೀಡಿಯೊಗಳನ್ನು ಪ್ರಸಾರ ಮಾಡಲಾಗಿದೆ.


2019ರ ನಂತರ ಬೆಂಗಳೂರು ಮತ್ತು ಹಾಸನದ ಅವರ ನಿವಾಸದಲ್ಲಿ ಸ್ಟೋರ್ ರೂಂನಲ್ಲಿ ಮೊಬೈಲ್ ಫೋನ್‌ನಿಂದ ಹೆಚ್ಚಿನ ವೀಡಿಯೊಗಳನ್ನು ಚಿತ್ರೀಕರಿಸಲಾಗಿದೆ ಎಂದು ಪ್ರಾಥಮಿಕ ತನಿಖೆ ತೋರಿಸಿದೆ. ಪೊಲೀಸರು ಅವುಗಳ ಸತ್ಯಾಸತ್ಯತೆಯನ್ನು ಪರಿಶೀಲಿಸಲು ಕೆಲವು ಪೆನ್ ಡ್ರೈವ್‌ಗಳನ್ನು ವಿಧಿವಿಜ್ಞಾನ ಪರೀಕ್ಷೆಗೆ ಕಳುಹಿಸಿದ್ದಾರೆ.

ಹಾಸನದಿಂದ ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟದ (ಎನ್‌ಡಿಎ) ಅಭ್ಯರ್ಥಿಯಾಗಿ ರೇವಣ್ಣ ಹೆಸರನ್ನು ಘೋಷಿಸುವ ತಿಂಗಳ ಹಿಂದೆಯೇ ರೇವಣ್ಣ ವಿರುದ್ಧದ ಆರೋಪಗಳ ಬಗ್ಗೆ ರಾಜ್ಯ ನಾಯಕತ್ವಕ್ಕೆ ಎಚ್ಚರಿಕೆ ನೀಡಿದ್ದೆವು ಎಂದು ಬಿಜೆಪಿ ಶಾಸಕ ಪ್ರೀತಮ್ ಗೌಡ ಮತ್ತು ಹಾಸನದ ಪಕ್ಷದ ಹಿರಿಯ ಮುಖಂಡ ದೇವರಾಜೇಗೌಡ ಸೋಮವಾರ ಹೇಳಿದ್ದಾರೆ.

"ಪ್ರಜ್ವಲ್ ರೇವಣ್ಣ ಅವರ ಕೃತ್ಯದ ಬಗ್ಗೆ ನರೇಂದ್ರ ಮೋದಿ ಅವರಿಗೆ ತಿಳಿದಿತ್ತು ಮತ್ತು ಇನ್ನೂ ಅವರ ಪರವಾಗಿ ಪ್ರಚಾರ ಮಾಡುತ್ತಿದ್ದರು ಎಂಬುದು ಆಘಾತಕಾರಿ ಸಂಗತಿಯಾಗಿದೆ" ಎಂದು ಓವೈಸಿ ಹೇಳಿದರು.

## ದೇವೇಗೌಡರ ಮೊಮ್ಮಗನ ಲೈಂಗಿಕ ಹಗರಣದಲ್ಲಿ ಕಾಂಗ್ರೆಸ್ ನಿಷ್ಕ್ರಿಯತೆ: ಅಮಿತ್ ಶಾ ಆರೋಪ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು,



ಮಾಜಿ ಪ್ರಧಾನಿ ಎಚ್‌ಡಿ ದೇವೇಗೌಡರ ಮೊಮ್ಮಗ ಮತ್ತು ಎನ್‌ಡಿಎ ಅಭ್ಯರ್ಥಿ ಪ್ರಜ್ವಲ್ ರೇವಣ್ಣ ಹಲವಾರು ಮಹಿಳೆಯರ ಮೇಲೆ ಲೈಂಗಿಕ ದೌರ್ಜನ್ಯ ಎಸಗಿರುವ ಅಶ್ಲೀಲ ಕ್ಲಿಪ್‌ಗಳ ಬಗ್ಗೆ ಕಾಂಗ್ರೆಸ್ ಸರ್ಕಾರ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಕೇಂದ್ರ ಸಚಿವ ಅಮಿತ್ ಶಾ ಆರೋಪಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಶಾ, ಈ ವಿಷಯದಲ್ಲಿ ಬಿಜೆಪಿ ನಿಲುವು ಸ್ಪಷ್ಟವಾಗಿದೆ; ಪಕ್ಷವು ಮಾತೃಶಕ್ತಿ (ತಾಯಂದಿರು ಅಥವಾ ಮಹಿಳೆಯರು) ಜೊತೆಗಿದೆ ಎಂದು ಹೇಳಿದರು."ನಾವು ದೇಶದ ಮಾತೃಶಕ್ತಿಯೊಂದಿಗೆ ನಿಲ್ಲುತ್ತೇವೆ ಎಂಬುದು ಬಿಜೆಪಿಯ ನಿಲುವು ಸ್ಪಷ್ಟವಾಗಿದೆ. ನಾನು ಕಾಂಗ್ರೆಸ್ ಅನ್ನು ಕೇಳಲು ಬಯಸುತ್ತೇನೆ, ಯಾರ ಸರ್ಕಾರವಿದೆ? ಸರ್ಕಾರವು ಕಾಂಗ್ರೆಸ್ ಪಕ್ಷದ್ದು, ಅವರು ಇಲ್ಲಿಯವರೆಗೆ ಏಕೆ ಯಾವುದೇ ಕ್ರಮ ಕೈಗೊಂಡಿಲ್ಲ? ಇದು ರಾಜ್ಯದ ಕಾನೂನು ಸುವ್ಯವಸ್ಥೆ ಸಮಸ್ಯೆಯಾಗಿರುವುದರಿಂದ ಈ ಬಗ್ಗೆ ರಾಜ್ಯ ಸರ್ಕಾರ ಕ್ರಮ ಕೈಗೊಳ್ಳಬೇಕು" ಎಂದು ತಮ್ಮ ಎನ್‌ಡಿಎ ಅಭ್ಯರ್ಥಿ ಜೊತೆಗೆ ಅಂತರ ಕಾಯ್ದುಕೊಂಡಿದ್ದಾರೆ.

ಮೇ 1, ಅಂತಾರಾಷ್ಟ್ರೀಯ ಕಾರ್ಮಿಕ ದಿನದ ನಿಮಿತ್ತ ವಿಶೇಷ ಲೇಖನ

# ಶ್ರಮಿಕ ವರ್ಗದ ಕೊಡುಗೆಯನ್ನು ಸ್ಮರಿಸೋಣ




'ದುಡಿಮೆಯೇ ದುಡ್ಡಿನ ತಾಯಿ' ಇದು ಒಂದು ಜನಪ್ರಿಯ ಗಾದೆ. ಗಾದೆಗಳು ವೇದಗಳಿಗೆ ಸಮ. ಗಾದೆಗಳು ಹಿರಿಯರ ಅನುಭವದ ನುಡಿಮುತ್ತುಗಳಾಗಿವೆ. ಹೀಗಾಗಿ ದುಡಿಮೆ ಅಥವಾ ದೈಹಿಕ ಶ್ರಮ ಹಾಗೂ ಅದರ ಮಹತ್ವವೇನು ಎಂಬುದನ್ನು ತಿಳಿಸುತ್ತದೆ. 'ಕೂತು ಉಣ್ಣುವವನಿಗೆ ಕುಡಿಕೆ ಹೊನ್ನೂ ಸಾಲದು' ಎಂಬಂತೆ ಇರುವ ಆಸ್ತಿ ಕರಗಿದ ಮೇಲೆ ಕಷ್ಟಪಡಬೇಕಾಗುತ್ತದೆ. ಆದ್ದರಿಂದ ಕಷ್ಟಪಟ್ಟರೆ ಸುಖವಿದೆ ಎಂಬುದು ಈ ಗಾದೆಯ ಆಶಯ, ಕೆಲಸ ಮಾಡುವ ಕಾರ್ಮಿಕರಿಗೆ ಅನ್ವಯಿಸುತ್ತದೆ.

ಈಗಿನ ಯಾಂತ್ರಿಕ ಯುಗದಲ್ಲೂ ದುಡಿಮೆಯ ಮಹತ್ವ ಕಡಿಮೆಯಾಗಿಲ್ಲ ಹಾಗಾಗಿ ಕಾರ್ಮಿಕರ ಕೊಡುಗೆಗೆ ಗೌರವ ಸಲ್ಲಿಸಲು ಮತ್ತು ಸಾಮಾಜಿಕ ಆರ್ಥಿಕ ಭದ್ರತೆ ಒದಗಿಸಲು ಪ್ರಪಂಚದಾದ್ಯಂತ ಹಲವಾರು ದೇಶಗಳಲ್ಲಿ ಪ್ರತಿ ವರ್ಷ ಮೇ 01ರಂದು ಅಂತಾರಾಷ್ಟ್ರೀಯ ಕಾರ್ಮಿಕ ದಿನವನ್ನು ಆಚರಿಸಲಾಗುತ್ತದೆ.

ಈ ದಿನವನ್ನು ಕಾರ್ಮಿಕ ಸಮುದಾಯಗಳ ಕೊಡುಗೆಗೆ ಸ್ಪಂದಿಸುವ ಜೊತೆಗೆ ಇನ್ನಷ್ಟು ಉದ್ಯೋಗಾವಕಾಶ ಸೃಷ್ಟಿಸಲು, ಕೆಲಸದ ಪರಿಸ್ಥಿತಿಗಳನ್ನು ಸುಧಾರಿಸಲು, ಸಾಮಾಜಿಕ ರಕ್ಷಣೆಯನ್ನು ನೀಡಲು ಮತ್ತು ಕಾರ್ಮಿಕರ ಹಕ್ಕುಗಳನ್ನು ರಕ್ಷಿಸಲು ಸಹಾಯ ಮಾಡುವ ಉದ್ದೇಶದಿಂದಲೂ ಆಚರಣೆಯನ್ನು ಮಾಡಲಾಗುತ್ತದೆ.

ಅದ್ಭುತ ಹೋರಾಟ ಫಲವಾಗಿ ಕಾರ್ಮಿಕ ದಿನಾಚರಣೆ ಜಾರಿಗೆ ಬಂದಿತು. ಈ ಹಿಂದೆ ಅಮೆರಿಕದ ಚಿಕಾಗೋ ನಗರದಲ್ಲಿ ಮೇ 1, 1886ರಲ್ಲಿ, ದಿನದ 15 ಗಂಟೆಗಳ ಕೆಲಸದ ಸಮಯವನ್ನು 8 ಗಂಟೆಗಳ ಅವಧಿಗೆ ತರಬೇಕು ಎಂಬ ಬೇಡಿಕೆಯನ್ನು ಮುಂದಿಟ್ಟುಕೊಂಡು ಕಾರ್ಮಿಕರು ಹೋರಾಟ ಮಾಡುತ್ತಿದ್ದರು. ಈ ಹೋರಾಟವು ತೀವ್ರ ಸ್ವರೂಪ ಪಡೆದಿದ್ದರಿಂದ ಇದನ್ನು ಹತ್ತಿಕ್ಕುವದಕ್ಕಾಗಿ ಮೇ 4ರಂದು ಪೋಲಿಸರು ಕಾರ್ಮಿಕರ ಮೇಲೆ ಗುಂಡಿನ ದಾಳಿ ನಡೆಸಿದರು. ಇದರ ಫಲವಾಗಿ ಅಂದರೆ 1916ರಲ್ಲಿ ಅಮೆರಿಕ ಸರ್ಕಾರ 8 ಗಂಟೆಗಳ ಕೆಲಸದ ಸಮಯವನ್ನು ಆದೇಶ ಮಾಡಿತು.

ಭಾರತದಲ್ಲಿ 1923ರ ಮೇ 1ರಂದು 'ಲೇಬರ್ ಕಿಸಾನ್ ಪಾರ್ಟಿ ಆಫ್ ಹಿಂದುಸ್ತಾನ್' ಸ್ಥಾಪನೆಗೊಂಡ ದಿನದಿಂದ ಕಾರ್ಮಿಕರ ದಿನಾಚರಣೆಯನ್ನು ಆಚರಣೆ ಮಾಡಲಾಗುತ್ತದೆ. ಆ ಸಮಯದಲ್ಲಿ ಇದನ್ನು 'ಮದ್ರಾಸ್ ಡೇ' ಎಂದು ಕರೆಯಲಾಗುತ್ತಿತು. ಭಾರತದಲ್ಲಿ 1927ರಿಂದೀಚೆಗೆ ಪ್ರತಿವರ್ಷವೂ ಕಾರ್ಮಿಕರು ಈ ದಿನವನ್ನಾಚರಿಸುತ್ತಿದ್ದಾರೆ. ಅದೇ ವರ್ಷ ಕಲ್ಕತ್ತದಲ್ಲಿ ಬಂಗಾಳ ಪ್ರದೇಶ ಕಾರ್ಮಿಕ ಸಂಘ ಕಾಂಗ್ರೆಸ್ ಮೇ ದಿನವನ್ನಾಚರಿಸಿದಾಗ ಪೊಲೀಸರು ಅನೇಕ ನಿರ್ಬಂಧಕಾಜ್ಞೆಗಳನ್ನು ವಿಧಿಸಿದರು. 1928ರಿಂದ 1934ರವರೆಗೆ ಆ ಉತ್ಸವಾಚರಣೆಯ ದಿನದಂದು ದಿನಾಚರಣೆಯ ಕಾರ್ಮಿಕರ ಅನೇಕ ಮುಷ್ಕರಗಳು ನಡೆದವು. ಎರಡನೆಯ ಮಹಾಯುದ್ಧಾನಂತರ ಆ ದಿನವನ್ನು ಹೆಚ್ಚು ವ್ಯಾಪಕವಾಗಿ ಆಚರಿಸಲು ಪ್ರಾರಂಭವಾಯಿತು.

1960ರಲ್ಲಿ ಬಾಂಬೆ ರಾಜ್ಯವನ್ನು ವಿಭಜಿಸಿ ಮಹಾರಾಷ್ಟ್ರ ಮತ್ತು ಗುಜರಾತ್ ಎಂಬ ಎರಡು ರಾಜ್ಯಗಳನ್ನು ರಚಿಸಲು ಭಾರತದಲ್ಲಿ ದಿನದ ಮತ್ತೊಂದು ಮಹತ್ವವಿದೆ ಮತ್ತು ಅದರಂತೆ ಎರಡೂ ರಾಜ್ಯಗಳು ಈ ದಿನವನ್ನು ಆಚರಿಸುತ್ತವೆ.

ಕೆಲಸದ ಸ್ಥಳದಲ್ಲಿ ಕಾರ್ಮಿಕರು ಕಠಿಣ ಪರಿಶ್ರಮ ಹಾಕುತ್ತಾರೆ. ಕೆಲಸದ ದಕ್ಷತೆ ಮತ್ತು ಭವಿಷ್ಯದ ಬೆಳವಣಿಗೆಗಳನ್ನು ಸುಧಾರಿಸಲು ಅವರು ಅದ್ಭುತವಾದ ಆಲೋಚನೆಗಳನ್ನು ಹೊಂದಿದ್ದಾರೆ. ಈ ದಿನವು ಅವರ ನಿರ್ವಹಣೆ ಮತ್ತು ಸಮಾಜದಿಂದ ಅವರ ನವೀನ ಆಲೋಚನೆಗಳನ್ನು ಕೇಳಲು, ಮೌಲ್ಯೀಕರಿಸಲು ಅವಕಾಶವನ್ನು ನೀಡುತ್ತದೆ. ಅವರು ಕೇವಲ ಕಾರ್ಮಿಕರ ಟ್ಯಾಗ್‌ನೊಂದಿಗೆ ಮುದ್ರೆಯೊತ್ತುವುದಿಲ್ಲ ಆದರೆ ಭಾಗವಹಿಸುವಿಕೆಯಿಂದ ನಿರ್ವಹಣೆಯ ಭಾಗವಾಗುತ್ತಾರೆ.

ಒಟ್ಟಾರೆಯಾಗಿ ಈ ದಿನ ಕಾರ್ಮಿಕರನ್ನು ಪ್ರೋತ್ಸಾಹಿಸುವ ದಿನವಾಗಿದೆ. ಈ ದಿನವು ಕೇವಲ ಒಂದು ದಿನದ ಆಚರಣೆಗೆ ಮಾತ್ರವಲ್ಲ, ಗುರಿಗಳನ್ನು ಅತ್ಯುತ್ತಮವಾಗಿಸಲು ಮತ್ತು ಅಭ್ಯಾಸಗಳನ್ನು ಸುಧಾರಿಸಲು ಇಡೀ ವರ್ಷ ಅವರನ್ನು ಚೆನ್ನಾಗಿ ಪರಿಗಣಿಸುತ್ತದೆ ಎಂದು ನಮಗೆ ನೆನಪಿಸುತ್ತದೆ. ರೈತರು, ಯೋಧರು, ಕಾರ್ಮಿಕರು ನಮ್ಮ ಪ್ರಾಣವಾಯು. ಇವರಿಲ್ಲದೆ ನಮ್ಮ ಬದುಕಿಲ್ಲ. ಮಾಲೀಕ ಕೇಂದ್ರಿತ ಆರ್ಥಿಕತೆಯಿಂದಾಗಿ ಕಾರ್ಮಿಕರ ಬದುಕು ಅವಸಾನದ ಹಾದಿಯಲ್ಲಿದೆ. ಕಾರ್ಮಿಕ ಕೇಂದ್ರಿತ ಆರ್ಥಿಕತೆ ಮಾತ್ರ ಅವರನ್ನು ಮತ್ತು ನಮ್ಮನ್ನು ಉಳಿಸಬಹುದು. ಆದ್ದರಿಂದ ಎಲ್ಲರಿಗೂ 'ವಿಶ್ವ ಕಾರ್ಮಿಕ ದಿನಾಚರಣೆ'ಯ ಶುಭಾಶಯಗಳು.



**– ಬಸವರಾಜ ಎಮ್.ಯರಗುಪ್ಪಿ. ಬಿಆರ್‌ಪಿ, ಶಿರಹಟ್ಟಿ.**

ಕೈಮಗ್ಗ, ಜವಳಿ ತಂತ್ರಜ್ಞಾನದಲ್ಲಿ ಲ್ಯಾಟರಲ್ ಎಂಟ್ರಿ ಮುಖಾಂತರ 2ನೇ ವರ್ಷದ ಡಿಪ್ಲೋಮಾ ಕೋರ್ಸ್

## ನೇರ ಪ್ರವೇಶಕ್ಕಾಗಿ ಅರ್ಜಿಗಳ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ



2024-25ನೇ ಸಾಲಿನ ಶೈಕ್ಷಣಿಕ ಅವಧಿಗೆ ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ ಲ್ಯಾಟರಲ್ ಎಂಟ್ರಿ ಮುಖಾಂತರ ನೇರವಾಗಿ 2ನೇ ವರ್ಷದ ಡಿಪ್ಲೋಮಾ (ಡಿ.ಹೆಚ್.ಟಿ.ಟಿ) ಕೋರ್ಸ್ ಪ್ರವೇಶಕ್ಕಾಗಿ 32 ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ವ್ಯಾಸಂಗದ ಸಮಯದಲ್ಲಿ ಮಾರ್ಗಸೂಚಿಯ ಪ್ರಕಾರ ಪ್ರತಿ ವಿದ್ಯಾರ್ಥಿಗೆ ಪ್ರತಿ ತಿಂಗಳು ರೂ.2,500ರಂತೆ ಶಿಷ್ಯವೇತನ ನೀಡಲಾಗುವುದು ಹಾಗೂ ಆಯ್ಕೆಯಾದ ಅಭ್ಯರ್ಥಿಗಳಿಗೆ ಆಯಾಯ ಐ.ಐ.ಹೆಚ್.ಟಿ. ನಿಯಮಾನುಸಾರ ವಸತಿ ನಿಲಯದ ಸೌಲಭ್ಯವನ್ನು ಕಲ್ಪಿಸಲಾಗುವುದು.

ವಿದ್ಯಾರ್ಹತೆ: ಗಣಿತ, ಭೌತಶಾಸ್ತ್ರ ಮತ್ತು ರಸಾಯನ ಶಾಸ್ತ್ರದೊಂದಿಗೆ 10+2 ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.

ಅಥವಾ ಯಾವುದೇ ಜವಳಿ ವಿಭಾಗದ ವೃತ್ತಿಪರ ವಿಭಾಗದಲ್ಲಿ 10+2 ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ 10ನೇ ತರಗತಿ ತೇರ್ಗಡೆ+(2 ವರ್ಷಗಳ ಐಟಿಐ) ತೇರ್ಗಡೆ ಎರಡನೇ ವರ್ಷದ ಡಿಪ್ಲೋಮಾ ಕೋರ್ಸ್‌ಗೆ ಪ್ರವೇಶಕ್ಕೆ ಅರ್ಹರು. 10+2 ಪಾಸ್+(2 ವರ್ಷಗಳ ಐಟಿಐ) ತೇರ್ಗಡೆ ಎರಡನೇ ವರ್ಷದ ಡಿಪ್ಲೋಮಾ ಕೋರ್ಸ್‌ಗೆ ಪ್ರವೇಶ ಪಡೆಯಲು ಅರ್ಹರು. ಜವಳಿ ವಿಭಾಗದ ವೃತ್ತಿಪರ ಸ್ಟ್ರೀಮ್‌ನಲ್ಲಿ 10+2 ಅರ್ಹತೆ ಹೊಂದಿರುವ ಅಭ್ಯರ್ಥಿಗಳು ಐ.ಐ.ಹೆಚ್.ಟಿ ನಡೆಸುವ ಗಣಿತ, ಭೌತಶಾಸ್ತ್ರ ರಸಾಯನಶಾಸ್ತ್ರದಲ್ಲಿ ಬ್ರಿಡ್ಜ್ ಕೋರ್ಸ್‌ನ್ನು ಅಭ್ಯಾಸ ಮಾಡಬೇಕು.

ವಯೋಮಿತಿ: ದಿನಾಂಕ 01-07-2024ಕ್ಕೆ ಅನ್ವಯಿಸುವಂತೆ ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ ವಯೋಮಿತಿ 25 ವರ್ಷ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ವಯೋಮಿತಿ 27 ವರ್ಷ. ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಕ್ರೋಢೀಕೃತ ಅಂಕಗಳು ಮೆರಿಟ್ ಲೆಕ್ಕಾಚಾರಕ್ಕೆ ಆಧಾರವಾಗಿರುತ್ತವೆ.

ಲಭ್ಯವಿರುವ ಸಂಸ್ಥೆಗಳು: ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಗದಗ-ಬೆಟಗೇರಿ (ಕರ್ನಾಟಕ)-13 ಅಭ್ಯರ್ಥಿಗಳು, ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಸೇಲಂ (ತಮಿಳುನಾಡು)-14 ಅಭ್ಯರ್ಥಿಗಳು, ಎಸ್.ಪಿ.ಕೆ.ಎಂ. ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ವೆಂಕಟಗಿರಿ (ನೆಲ್ಲೂರು ಜಿಲ್ಲೆ, ಆಂಧ್ರಪ್ರದೇಶ) 03 ಅಭ್ಯರ್ಥಿಗಳು, ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಕಣ್ಣೂರು (ಕೇರಳ)-02 ಅಭ್ಯರ್ಥಿಗಳು.

ಮೆರಿಟ್ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳನ್ನು ಆಯಾ ಡಿಪ್ಲೋಮಾ ಸಂಸ್ಥೆಗಳಲ್ಲಿ ಕೋರ್ಸ್ ಪ್ರವೇಶ ಕುರಿತಂತೆ ಕೌನ್ಸಿಲಿಂಗ್‌ಗಾಗಿ ಕರೆಯಲಾಗುವುದು. ಆಸಕ್ತಿ ಇರುವ ಅಭ್ಯರ್ಥಿಗಳು ಹೆಚ್ಚಿನ ವಿವರಗಳಿಗಾಗಿ ಮತ್ತು ಅರ್ಜಿ ಫಾರಂಗಳಿಗಾಗಿ ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ-ಬೆಟಗೇರಿ ದೂರವಾಣಿ ಸಂ-08372-297221 ಮೊಬೈಲ್-9449162822 ಅಥವಾ ಉಪ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಜಿಲ್ಲಾ ಪಂಚಾಯತ್, ಗದಗ ಮೊಬೈಲ್‌ಸಂಖ್ಯೆ-9980208292,9916582238 ಇವರುಗಳನ್ನು ಸಂಪರ್ಕಿಸಿ ಪಡೆಯಬಹುದಾಗಿದೆ.

ಅರ್ಜಿಗಳನ್ನು ಆನಲೈನ್‌ನಲ್ಲಿ ಡೌನಲೊಡ್ ಮಾಡಿಕೊಳ್ಳಲು ಲಿಂಕ್ https://khtigadag.ac.in/ateralentryadmis-sionform.pdf ಪೂರ್ಣವಾಗಿ ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲಾತಿಗಳೊಂದಿಗೆ ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ-ಬೆಟಗೇರಿ-582102 ಇವರಿಗೆ ಸಲ್ಲಿಸಲು ಕೊನೆಯ ದಿನಾಂಕ: 31-05-2024.

## ಗಾಝಾ ಹತ್ಯಾಕಾಂಡ: ನೆತನ್ಯಾಹು ಸೇರಿ ಇಸ್ರೇಲ್ ಅಧಿಕಾರಿಗಳ ಬಂಧನಕ್ಕೆ ವಾರೆಂಟ್ ಜಾರಿ ಸಾಧ್ಯತೆ



■ವಿಜಯಸಾಕ್ಷಿ ಸುದ್ದಿ, ಇಸ್ರೇಲ್

ಕಳೆದ ಆರು ತಿಂಗಳಿನಿಂದ ಗಾಝಾದಲ್ಲಿಇಸ್ರೇಲ್ ನಡೆಸುತ್ತಿರುವ ಹತ್ಯಾಕಾಂಡವನ್ನು'ಯುದ್ಧ ಅಪರಾಧ' ಮತ್ತು 'ಮಾನವ ಹಕ್ಕುಗಳ ಉಲ್ಲಂಘನೆ' ಎಂದು ಅಂತರಾಷ್ಟ್ರೀಯ ಕ್ರಿಮಿನಲ್ ನ್ಯಾಯಾಲಯ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಸೇರಿದಂತೆ ಹಿರಿಯ ಅಧಿಕಾರಿಗಳ ಬಂಧನಕ್ಕೆ ವಾರೆಂಟ್ ಜಾರಿ ಮಾಡುವ ಸಾಧ್ಯತೆ ಇದೆ.

ಇಸ್ರೇಲ್ ಉಂಟು ಮಾಡಿದ ಯುದ್ಧಾಪರಾಧ ಮತ್ತು ಮಾನವೀಯತೆಯ ವಿರುದ್ಧದ ಅಪರಾಧದ ಬಗ್ಗೆ ಐಸಿಸಿ ತನಿಖೆ ನಡೆಸುತ್ತಿದ್ದು ಆರೋಪ ಸಾಬೀತಾದರೆ ಯುದ್ಧಕ್ಕೆ ಕಾರಣರಾದವರ ವಿರುದ್ಧ ಪ್ರಕರಣ ದಾಖಲಿಸಬಹುದು. ವಿಧ್ವಂಸಕ ಮಿಲಿಟರಿ ದಾಳಿ ಹಿನ್ನೆಲೆ ಐಸಿಸಿ ಇಸ್ರೇಲ್ ಮೇಲೆ ಯುದ್ಧ ಅಪರಾಧ, ಮಾನವೀಯತೆಯ ವಿರುದ್ಧದ ಅಪರಾಧ ಮತ್ತು ನರಮೇಧಗಳ ಆರೋಪವನ್ನು ಹೊರಿಸಬಹುದಾಗಿದೆ. ಗಾಝಾದಲ್ಲಿ ಅಂತರಾಷ್ಟ್ರೀಯ ಮಾನವ ಹಕ್ಕುಗಳ ಉಲ್ಲಂಘನೆ ಆರೋಪದಲ್ಲಿ ಪ್ರಧಾನಿ ಬೆಂಜಮಿನ್ ನೆತನ್ಯಾಹು ಸೇರಿದಂತೆ ಇಸ್ರೇಲ್‌ನ ಉನ್ನತ ಅಧಿಕಾರಿಗಳು ಮತ್ತು ಸೇನಾಧಿಕಾರಿಗಳ ವಿರುದ್ಧ ಐಸಿಸಿ ಶೀಘ್ರವೇ ಬಂಧನ ವಾರಂಟ್ ಜಾರಿಗೊಳಿಸಬಹುದು ಎಂದು ಇಸ್ರೇಲ್ ಮಾಧ್ಯಮಗಳು ವರದಿ ಮಾಡಿವೆ.

ಡಂಬಳ ಹೋಬಳಿಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪರ ಶಾಸಕ ಜಿ.ಎಸ್. ಪಾಟೀಲ ಪ್ರಚಾರ

## ಬಿಜೆಪಿಯಿಂದ ದೇಶ ಸಾಲದ ಸುಳಿಯಲ್ಲಿದೆ

■ವಿಜಯಸಾಕ್ಷಿ ಸುದ್ದಿ, ಡಂಬಳ



ಬಡವರ, ರೈತರ, ಕಾರ್ಮಿಕರ, ಮಹಿಳೆಯರ ಪರ ಇರುವ ಜನಪರ ಕಾಂಗ್ರೆಸ್ ಗ್ಯಾರಂಟಿಗಳು ಜನರಿಗೆ ತಲುಪುತ್ತಿದ್ದು, ಬಡವರು, ನಿರ್ಗತಿಕರು ಮತ್ತು ವಯೋವೃದ್ಧರ ಬದುಕಿಗೆ ಆಶಾಕಿರಣಗಳಾಗಿವೆ. ಸರ್ಕಾರದ ಯೋಜನೆ ಪಡೆಯುವ ಪ್ರತಿಯೊಬ್ಬ ಫಲಾನುಭವಿಗಳು ಕಾಂಗ್ರೆಸ್ ಪಕ್ಷಕ್ಕೆ ಆಶೀರ್ವಾದ ಮಾಡಬೇಕು ಎಂದು ರೋಣ ಮತಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲ್ ಕೋರಿದರು.


ಡಂಬಳ ಹೋಬಳಿಯ ಚಿಕ್ಕವಡ್ಡಟ್ಟಿ, ಗುಡ್ಡದಬೂದಿಹಾಳ, ಮುರಡಿ, ಕೆಲೂರ, ಹಾರೂಗೇರಿ, ಬಸಾಪೂರ, ತಾಮ್ರಗುಂಡಿ ಗ್ರಾಮಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಪರ ಮತಯಾಚಿಸಿ ಮಾತನಾಡಿದ ಅವರು, 2014ರಲ್ಲಿ ಅಧಿಕಾರಕ್ಕೆ ಬಂದ ಮೋದಿ ಸರ್ಕಾರ ಸುಳ್ಳಿನ ಮೂಲಕ ಅಧಿಕಾರ ನಡೆಸಿದೆ. ಖಾಸಗಿ ಕಂಪನಿಗಳ ಒಲೈಕೆಗಾಗಿ ಅವರು ಮಾಡಿರುವ ಕೋಟ್ಯಾಂತರ ಸಾಲ ಮನ್ನಾ ಮಾಡಿ ದೇಶವನ್ನು ಸಾಲದ ಸುಳಿಯಲ್ಲಿ ಸಿಲುಕಿಸಿರುವ ನರೇಂದ್ರ ಮೋದಿಯವರಿಗೆ ಜನಸಾಮಾನ್ಯರು ತಕ್ಕ ಉತ್ತರ ನೀಡಲಿದ್ದಾರೆ ಎಂದರು.

ಬಿಜೆಪಿ ಪಕ್ಷವನ್ನು ತೊರೆದು ಚಿಕ್ಕವಡ್ಡಟ್ಟಿ, ಗುಡ್ಡದಬೂದಿಹಾಳ, ಹಾರೂಗೇರಿ ಗ್ರಾಮದಲ್ಲಿ ನೂರಾರು ಯುವಕರು ಹಿರಿಯರು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದರು.

> ಇಂದು ಕಡು ಬಡವರು ಉತ್ತಮ ಬದುಕು ಬಾಳಬೇಕು ಎನ್ನುವ ಹಿನ್ನೆಲೆಯಲ್ಲಿ ಗ್ಯಾರಂಟಿ ಯೋಜನೆಗಳನ್ನು ಜನರ ಬಾಗಿಲಿಗೆ ತಲುಪಿಸಲಾಗುತ್ತಿದೆ. ರೈತರ ಸಾಲ ಮನ್ನಾ ಮಾಡಲಾವುದು. ನುಡಿದಂತೆ ನಡೆಯುವ ಕಾಂಗ್ರೆಸ್ ಪಕ್ಷದ ಹಾವೇರಿ-ಗದಗ ಲೋಕ ಸಭಾ ಕ್ಷೇತ್ರದ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರಿಗೆ ಮತ ನೀಡಿ ಆಶೀರ್ವದಿಸಬೇಕು ಎಂದು ಶಾಸಕ ಜಿ.ಎಸ್. ಪಾಟೀಲ ಕೋರಿದರು.

ಕಾರ್ಯಕ್ರಮದಲ್ಲಿ ಗೋಣಿಬಸಪ್ಪ ಕೊರ್ಲಹಳ್ಳಿ, ವಿ.ಎಸ್. ಯರಾಶಿ, ಬಸುರಡ್ಡಿ ಬಂಡಿಹಾಳ, ಪುಲಿಕೇಶಗೌಡ ಪಾಟೀಲ್, ಶರಣು ಬಂಡಿಹಾಳ, ಬಸುರಾಜ ಪೂಜಾರ, ರಾಜು ಡಾವಣಗೇರಿ, ಪ್ರಧಾನಿ ಕೆರಿ, ಮರಿಯಪ್ಪ ಸಿದ್ದಣ್ಣವರ, ಜಾಕೀರ ಮೂಲಿಮನಿ, ಸುರೇಶ ಮಾಳಗಿ, ಸುರೇಶ ಗಡಗಿ, ಶರಣಪ್ಪ ಮಾಗಡಿ, ಬಾಬು ಮೂಲಿಮನಿ, ಅಡವೆಪ್ಪ, ಬಸಪ್ಪ ಕುರಿ, ಹಾಲೇಶ ಹಳ್ಳಿ, ಶೋಭಾ, ರೇಖಾ ಭಜಂತ್ರಿ, ವಿಶ್ವನಾಥ ಪಾಟೀಲ್, ಮಲ್ಲಿಕಾರ್ಜುನ ಪ್ಯಾಟಿ, ಮುತ್ತಣ್ಣ ಕೊಂತಿಕಲ್ಲ, ನೂರಹಮ್ಮದ ಸರಕಾವಾಸ ಮಹಿಳೆಯರು ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಇದ್ದರು.

## 45 ಡಿಗ್ರಿ ತಲುಪಿದ ತಾಪಮಾನದಿಂದ ಬಿಸಿಗಾಳಿ; 4 ರಾಜ್ಯಗಳಿಗೆ ರೆಡ್ ಅಲರ್ಟ್ ಘೋಷಣೆ



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಭಾರತೀಯ ಹವಾಮಾನ ಇಲಾಖೆ (ಐಎಂಡಿ) ಆಂಧ್ರ ಪ್ರದೇಶ, ಬಿಹಾರ, ಪಶ್ಚಿಮ ಬಂಗಾಳ ಮತ್ತು ಒಡಿಶಾ ರಾಜ್ಯಗಳಿಗೆ ಮುಂದಿನ ಎರಡು ಮೂರು ದಿನಗಳ ಕಾಲ ಬಿಸಿಗಾಳಿಯಿಂದಾಗಿ ರೆಡ್ ಅಲರ್ಟ್ ಘೋಷಿಸಿದೆ. ದೇಶದ ಕೆಲವು ಭಾಗಗಳು ಈಗಾಗಲೇ ತೀವ್ರವಾದ ಶಾಖದಿಂದ ತತ್ತರಿಸುತ್ತಿವೆ, ಇದರಿಂದಾಗಿ ಸರ್ಕಾರಿ ಏಜೆನ್ಸಿಗಳು ಆರೋಗ್ಯ ಎಚ್ಚರಿಕೆಗಳನ್ನು ನೀಡಿವೆ. ಈಗಾಗಲೇ ಕೆಲವು ರಾಜ್ಯಗಳು ತರಗತಿಗಳನ್ನು ಸ್ಥಗಿತಗೊಳಿಸಿವೆ.

ಸೋಮವಾರ ರಾತ್ರಿ ಬಿಡುಗಡೆಯಾದ ತನ್ನ ಇತ್ತೀಚಿನ ಹವಾಮಾನ ಬುಲೆಟಿನ್‌ನಲ್ಲಿ, 'ಪೂರ್ವ ಭಾರತದಲ್ಲಿ ಬುಧವಾರದವರೆಗೆ ತೀವ್ರವಾದ ಬಿಸಿಯಾದ ಪರಿಸ್ಥಿತಿಗಳು ನಿರೀಕ್ಷಿಸಲಾಗಿದೆ. ಆದರೆ, ಇದು ಮುಂದಿನ ಐದು ದಿನಗಳವರೆಗೆ ದಕ್ಷಿಣ ಪರ್ಯಾಯ ದ್ವೀಪದಲ್ಲಿ ಮುಂದುವರಿಯುತ್ತದೆ' ಎಂದು ಹೇಳಿದೆ.

ತೆಲಂಗಾಣ, ಕರ್ನಾಟಕ ಮತ್ತು ಸಿಕ್ಕಿಂನ ಕೆಲವು ಭಾಗಗಳಿಗೆ ಐಎಂಡಿ ಆರೆಂಜ್ ಅಲರ್ಟ್ ಕೂಡ ನೀಡಿದೆ.

ಪಶ್ಚಿಮ ಬಂಗಾಳ, ಗುಜರಾತ್, ಬಿಹಾರ, ಸಿಕ್ಕಿಂ, ಒಡಿಶಾ, ಜಾರ್ಖಂಡ್, ಕೇರಳ ಮತ್ತು ಆಂಧ್ರಪ್ರದೇಶದ ಕೆಲವು ಭಾಗಗಳಲ್ಲಿ ಸೋಮವಾರ ದಾಖಲೆಯ ಬಿಸಿಗಾಳಿ ಮೇಲುಗೈ ಸಾಧಿಸಿದೆ.

### 'ನಮ್ಮ ನಡೆ ಮತಗಟ್ಟೆ ಕಡೆಗೆ' ಜಾಗೃತಿ ಜಾಥಾದಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್

# ಮತದಾನ ಮಾಡಿ, ಸಂವಿಧಾನ ಬಲಪಡಿಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಕಳೆದ ಚುನಾವಣೆಯಲ್ಲಿ ಬೆಟಗೇರಿಯ ಭಾಗದಲ್ಲಿ ಕಡಿಮೆ ಮತದಾನ ವಾಗಿದ್ದು, ಈ ಪ್ರದೇಶಗಳಲ್ಲಿ ಈ ಬಾರಿ ನೂರಕ್ಕೆ ನೂರರಷ್ಟು ಮತದಾನವಾಗಬೇಕು. ಮತದಾನ ಮಾಡುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ತಮ್ಮ ಮತಗಟ್ಟೆ ಸಂಖ್ಯೆ, ಮತಗಟ್ಟೆ ಭಾಗದ ಕ್ರಮ ಸಂಖ್ಯೆ ಮುಂತಾದ ಮಾಹಿತಿ ತಿಳಿದುಕೊಂಡು ಕಡ್ಡಾಯವಾಗಿ ಮತದಾನ ಮಾಡುವಂತಾಗಬೇಕು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಕೋರಿದರು.

ಭಾರತ ಚುನಾವಣಾ ಅಯೋಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವ್ಯವಸ್ಥಿತ ಮತದಾರರ ಶಿಕ್ಷಣ ಮತ್ತು ಸಹ ಭಾಗಿತ್ವ ಸಮಿತಿ (ಸ್ವೀಪ್), ಹಿಂದುಳಿದ ಕಲ್ಯಾಣ ಇಲಾಖೆ ಸಹಯೋಗದೊಂದಿಗೆ ನಗರದ ಬೆಟಗೇರಿಯ ಅಂಬಾಭವಾನಿ ವೃತ್ತದಲ್ಲಿ ನಡೆದ 'ನಮ್ಮ ನಡೆ ಮತಗಟ್ಟೆ ಕಡೆಗೆ' ಮತದಾನ ಜಾಗೃತಿ ಕಾರ್ಯಕ್ರಮಕ್ಕೆ ಜಿ.ಪಂ ಸಿಇಓ ಭರತ್. ಎಸ್ ಅವರೊಂದಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ರವಿ ಗುಂಜೀಕರ ಮಾತನಾಡಿ, ಮತದಾನ ಯಶಸ್ವಿಗೊಳಿಸುವ




ನಿಟ್ಟಿನಲ್ಲಿ ಎಲ್ಲರೂ ಸಹಕರಿಸಬೇಕು. ಮತದಾನವನ್ನು ಹಬ್ಬದ ರೀತಿಯಲ್ಲಿ ಆಚರಿಸುವ ಮೂಲಕ ಪ್ರತಿಯೊಬ್ಬರೂ ಪಾಲ್ಗೊಳ್ಳಬೇಕು ಎಂದು ತಿಳಿಸಿದರು.

ಜಾಥಾ ಕಾರ್ಯಕ್ರಮವು ಗದಗ ಬೆಟಗೇರಿಯ ಅಂಬಾಭವಾನಿ ವೃತ್ತದಿಂದ ಕುರಟ್ಟಿಪೇಟೆ, ಬಸ್ ನಿಲ್ದಾಣ, ಮಂಜುನಾಥ ನಗರ, ಹುಯಿಲಗೋಳ ರಸ್ತೆ ಮಾರ್ಗವಾಗಿ ತಾರಾಲಯವನ್ನು ತಲುಪಿತು. ಜಾಥಾದಲ್ಲಿ ಬೈಕ್ ರ್‍ಯಾಲಿ, ನಾನಾ ಕಲಾ ತಂಡಗಳಿಂದ ಕಲಾ ಪ್ರದರ್ಶನ, ವಿದ್ಯಾರ್ಥಿಗಳ ವೇಷ-ಭೂಷಣಗಳ ಮೂಲಕ ಮತದಾರರಲ್ಲಿ ಜಾಗೃತಿ ಮೂಡಿಸಿದ್ದು ವಿಶೇಷವಾಗಿತ್ತು.

ಜಿ.ಪಂ ಸಿಇಓ ಭರತ್.ಎಸ್ ಮಾತನಾಡಿ, ಮೇ.7ರಂದು ಮತದಾನ ನಡೆಯಲಿದ್ದು, ಊರ ಜಾತ್ರೆಯ ರೀತಿ ಕುಟುಂಬ, ಸ್ನೇಹಿತರೊಂದಿಗೆ 18 ವರ್ಷ ಮೇಲ್ಪಟ್ಟ ಎಲ್ಲರೂ ಮತದಾನ ಮಾಡುವಂತಾಗಬೇಕು. ಪ್ರತಿ ಮತವೂ ಸಹ ಅಮೂಲ್ಯವಾಗಿದೆ ಎಂದು ತಿಳಿಸಿದರು.

ಜಿ.ಪಂ ಉಪ ಕಾರ್ಯದರ್ಶಿ ಸಿ.ಬಿ. ದೇವರಮನಿ, ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಿಬ್ಬಂದಿಗಳು, ವಸತಿ ನಿಲಯದ ವಿದ್ಯಾರ್ಥಿಗಳು, ಕಲಾ ತಂಡಗಳ ಸದಸ್ಯರು ಇದ್ದರು.



## ಬಿಜೆಪಿ ಸೇರಿದ ಕಾಂಗ್ರೆಸ್ ಮುಖಂಡರು



**■ವಿಜಯಸಾಕ್ಷಿ ಸುದ್ದಿ, ಹಾನಗಲ್**

ಹಾನಗಲ್ ತಾಲೂಕು ಯುವ ಕಾಂಗ್ರೆಸ್ ಘಟಕದ ಮಾಜಿ ಅಧ್ಯಕ್ಷ ವಾಸುದೇವ ಉರಣಕರ್ ಸೇರಿದಂತೆ ಅನೇಕ ಯುವ ಕಾಂಗ್ರೆಸ್ ಮುಖಂಡರು ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿಯವರ ಸಮ್ಮುಖದಲ್ಲಿ ಬಿಜೆಪಿ ಸೇರ್ಪಡೆಯಾದರು.

ರಾಮಣ್ಣ ಯಳ್ಳೂರ, ಬಸವರಾಜ ಹಾದಿಮನಿ, ಶಂಕರಗೌಡ ಪಾಟೀಲ, ಬಸನಗೌಡ ಪಾಟೀಲ್ ಮಾಜಿ ಗ್ರಾಮ ಪಂಚಾಯಿತಿ ಸದಸ್ಯ ಹುಲ್ಲತ್ತಿ, ವಿಜಯ್ ಉರಣಕರ್, ಗ್ರಾಮ ಪಂಚಾಯತಿ ಅಧ್ಯಕ್ಷ ಹಾಗೂ ಹಾಲಿ ಸದಸ್ಯರು ಬಿಜೆಪಿ ಸೇರ್ಪಡೆಯಾದರು.

## ಮೇ 4ಕ್ಕೆ ಗದುಗಿಗೆ ಪ್ರಿಯಾಂಕಾ ಗಾಂಧಿ



**■ವಿಜಯಸಾಕ್ಷಿ ಸುದ್ದಿ, ಗದಗ**

ಹಾವೇರಿ-ಗದಗ ಲೋಕಸಭಾ ಮತಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದ್ದೇವರಮಠ ಅವರ ಪರ ಪ್ರಚಾರ ಮಾಡಿ, ಮತಯಾಚನೆ ಮಾಡಲು ಕಾಂಗ್ರೆಸ್ ಪಕ್ಷದ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ಮೇ 4ರಂದು ನಗರಕ್ಕೆ ಆಗಮಿಸಲಿದ್ದಾರೆ.

ಪ್ರಚಾರ ಸಭೆ ನಗರದ ಮುನ್ಸಿಪಲ್ ಹೈಸ್ಕೂಲ್ ಆವರಣದಲ್ಲಿ ನಡೆಯಲಿದ್ದು, ಈ ಹಿನ್ನೆಲೆಯಲ್ಲಿ ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ, ಕಂದಾಯ ಸಚಿವ ಕೃಷ್ಣ ಬೈರೇಗೌಡ ಅವರು ಸಮಾವೇಶ ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿದರು.

ಸಮಾವೇಶದ ವೇದಿಕೆ, 15 ಸಾವಿರಕ್ಕೂ ಅಧಿಕ ಆಸನಗಳ ಅಳವಡಿಕೆ, ಭದ್ರತೆ, ವಿಶೇಷ ಆಸನಗಳ ವ್ಯವಸ್ಥೆ ಕುರಿತು ಚರ್ಚಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ, ರೋಣ ಶಾಸಕ ಜಿ.ಎಸ್. ಪಾಟೀಲ, ಗದಗ ಶಹರ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ, ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಮಾಜಿ ಅಧ್ಯಕ್ಷ ಪ್ರಭು ಬುರಬುರೆ, ಜಿ.ಪಂ ಮಾಜಿ ಅಧ್ಯಕ್ಷ ಸಿದ್ದು ಪಾಟೀಲ, ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ, ಪ್ರಧಾನ ಕಾರ್ಯದರ್ಶಿ ಕೃಷ್ಣಗೌಡ ಪಾಟೀಲ ಸೇರಿ ಹಲವರು ಇದ್ದರು.

### ಬಾಗಲಕೋಟ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಪಿ.ಸಿ. ಗದ್ದಿಗೌಡ್ರ ಪರ ಚುನಾವಣಾ ಪ್ರಚಾರ

# ಕಾಂಗ್ರೆಸ್‌ನ ಗ್ಯಾರಂಟಿ ಆಮಿಷಕ್ಕೆ ಬಲಿಯಾಗದಿರಿ

**■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಕಾಂಗ್ರೆಸ್ಸಿನ ಗ್ಯಾರಂಟಿ ಯೋಜನೆಗಳ ಆಮಿಷಕ್ಕೆ ಬಲಿಯಾಗದೇ ದೇಶದ ಭವಿಷ್ಯವನ್ನು ರೂಪಿಸುವ ಬಿಜೆಪಿಯನ್ನು ಬೆಂಬಲಿಸಿ, ಮೋದಿಜಿಯವರನ್ನು ಮತ್ತೊಮ್ಮೆ ಪ್ರಧಾನಿ ಮಾಡಬೇಕು ಎಂದು ನರಗುಂದ ಮತಕ್ಷೇತ್ರದ ಬಿಜೆಪಿ ಯುವ ಮುಖಂಡ ಉಮೇಶಗೌಡ ಪಾಟೀಲ ವಿನಂತಿಸಿದರು.

ಇಲ್ಲಿಯ 6, 8, 9 ಮತ್ತು 10ನೇ ವಾರ್ಡ್‌ಗಳಲ್ಲಿ ಬಾಗಲಕೋಟ ಲೋಕಸಭಾದ ಬಿಜೆಪಿ ಅಭ್ಯರ್ಥಿ ಪಿ.ಸಿ. ಗದ್ದಿಗೌಡ್ರ ಪರ ಚುನಾವಣಾ ಪ್ರಚಾರ ಸಭೆಯಲ್ಲಿ ಮಾತನಾಡಿದ ಅವರು, ಇಂದು ಕಾಂಗ್ರೆಸ್ ಪಕ್ಷವು ವಿಧಾನಸಭೆಯಲ್ಲಿ ಆಮಿಷವೊಡ್ಡಿ ಮತ ಪಡೆದಂತೆ ಲೋಕಸಭಾ ಚುನಾವಣಿಯಲ್ಲಿಯೂ ಸಹ ಮನೆ ಮನೆಗೆ ಗ್ಯಾರಂಟಿ ಕಾರ್ಡ್‌ಗಳನ್ನು ವಿತರಿಸಿ ಮಹಿಳೆಯರಿಗೆ ವರ್ಷಕ್ಕೆ 1 ಲಕ್ಷ ನೀಡುವುದಾಗಿ ಮತದಾರರನ್ನು ಸೆಳೆಯುತ್ತಿದ್ದಾರೆ. 65 ವರ್ಷ ಆಳಿದ ಕಾಂಗ್ರೆಸ್ ಪಕ್ಷವು ಇಂತಹ ಉಚಿತ ಗ್ಯಾರಂಟಿಗಳನ್ನು ಅಧಿಕಾರದಲ್ಲಿದ್ದಾಗ ಮಾಡದೇ ಈಗ ಸೋಲುವ ಭಯದಿಂದ ಹಣದ ಆಮಿಷ ತೋರಿಸುತ್ತಿದ್ದಾರೆ ಎಂದು ಆರೋಪಿಸಿದರು.



ಗ್ರಾ.ಪಂ ಮಾಜಿ ಸದಸ್ಯ ಅಂದಪ್ಪ ತಿಮ್ಮಾಪೂರ, ಗ್ರಾ.ಪಂ ಮಾಜಿ ಅಧ್ಯಕ್ಷೆ ಲಲಿತಾ ಗೌಡರ, ಯುವ ಮುಖಂಡ ಮಹೇಶ ಮುಸ್ಕಿನಭಾವಿ, ಯುವ ಧುರೀಣ ಮರಿಯಪ್ಪ ವಡ್ಡರ, ಗ್ರಾ.ಪಂ ಸದಸ್ಯರಾದ ರುದ್ರಪ್ಪ ಮುಸ್ಕಿನಭಾವಿ, ವೀರಣ್ಣ ಚಕ್ರಸಾಲಿ, ಮಹಾಂತೇಶ ಕಮತರ, ಮಂಜುಳಾ ಮೆಣಸಿನಕಾಯಿ, ಶಿವಪ್ಪ ಬಳಿಗೇರ, ವಿರುಪಾಕ್ಷಿ ಬೆಟಗೇರಿ, ಮಂಜುಳಾ ಪೂಜಾರ, ಎಸ್.ಬಿ. ಕಲಕೇರಿ, ದತ್ತಣ್ಣ ಜೋಶಿ, ಈರಪ್ಪ ಅಜಿನಾಳ, ಕಳಕೇಶ ಟೆಂಗಿನಕಾಯಿ, ಎಂ.ಎಂ. ಹುಬ್ಬಳ್ಳಿ, ಶರಣಯ್ಯ ಮುಳಕೊಂಪಿಮಠ, ಚಂದ್ರಗೌಡ ಪಾಟೀಲ, ಉಪಸ್ಥಿತರಿದ್ದರು. ಮರಿಯಪ್ಪ ವಡ್ಡರ ಸ್ವಾಗತಿಸಿದರು. ಮುಖಂಡ ಪ್ರಕಾಶ ಅರಹುಣಸಿ ನಿರೂಪಿಸಿದರು. ವೆಂಕಟೇಶ ದೊಂಗಡೆ ವಂದಿಸಿದರು.

ಬಿಜೆಪಿ ಹಿರಿಯ ಮುಖಂಡ ವಸಂತ ಮೇಟಿ ಮಾತನಾಡಿ, ಗ್ಯಾರಂಟಿ ಯೋಜನೆಗಳಿಂದ ವಿದ್ಯುತ್ ದರ, ಮುದ್ರಾಂಕ ಶುಲ್ಕ, ಮದ್ಯ ಸೇರಿದಂತೆ ದಿನಸಿ ವಸ್ತುಗಳು ದುಬಾರಿಯಾಗಿದ್ದು, ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಪಿತ್ರಾರ್ಜಿತ ಆಸ್ತಿಯಲ್ಲಿ ಶೇ. 55ರಷ್ಟು ಆಸ್ತಿ ಸರಕಾರದ ಪಾಲಾಗಲಿದೆ. ಇಡೀ ದೇಶವೇ ಕೊರೋನಾ ರೋಗದಿಂದ ಬಳಲುತ್ತಿರುವಾಗ ಉಚಿತವಾಗಿ ವ್ಯಾಕ್ಸಿನ್ ನೀಡಿ ಬಿಜೆಪಿ ಸರಕಾರ ಕಾಪಾಡಿದೆ. ಪಕ್ಷದಿಂದ ದೇಶದ ಗೌರವ, ಘನತೆ ಹೆಚ್ಚಾಗಿದ್ದು, ಮೋದಿ ಮತ್ತೊಮ್ಮೆ ಪ್ರದಾನಿಯಾಗುವುದು ಖಚಿತ ಎಂದರು.

## ಸಂಘಟನೆ ಬೆಳೆಯಲು ಎಲ್ಲರ ಕಾಣಿಕೆ ಅವಶ್ಯಕ



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಯಾವುದೇ ಸಂಘಟನೆ ಬಲಿಷ್ಠವಾಗಿ ಬೆಳೆಯಬೇಕೆಂದರೆ ಅದರಲ್ಲಿನ ಸದಸ್ಯರ ಕಾಣಿಕೆ ಬಹಳಷ್ಟು ಅವಶ್ಯಕ. ಸದಸ್ಯರು ಸಂಘದ ಬೆಳವಣಿಗೆಗೆ ಶ್ರಮಿಸಬೇಕೆಂದು ನಿವೃತ್ತ ಶಿಕ್ಷಕ ಎಂ.ಎ. ಹಿರೆವಡೆಯರ ಹೇಳಿದರು.

ಪಟ್ಟಣದ ಹಿರೇಮಠದ ಸಭಾಭವನದಲ್ಲಿ ನಡೆದ ನಿವೃತ್ತ ನೌಕರರ ಸಂಘ ಹಾಗೂ ಹಿರಿಯ ನಾಗರಿಕರ ಕ್ಷೇಮಾಭಿವೃದ್ಧಿ ಸಂಘದ ಮಾಸಿಕ ಸಭೆಯಲ್ಲಿ ಅವರು ಮಾತನಾಡಿದರು.

ಸಂಘ ಯಾವುದೇ ಇರಲಿ, ಅದು ಸಮಾಜಮುಖಿಯಾಗಿ ಕೆಲಸ ನಿರ್ವಹಿಸಿದಾಗ ಮಾತ್ರ ತನ್ನನ್ನು ತಾನು ಗುರುತಿಸಿಕೊಳ್ಳಲು ಸಹಾಯಕವಾಗುತ್ತದೆ. ಇಂತಹ ಗುರುತಿಸುವಿಕೆ ಈ ಸಂಘಕ್ಕೂ ದೊರಕಬೇಕೆಂದರೆ ಈ ಸಂಘವೂ ಸಹ ಅನೇಕ ಸಾಮಾಜಿಕ ಕಾರ್ಯಗಳನ್ನು ಹಮ್ಮಿಕೊಳ್ಳಬೇಕು. ಇದರಿಂದ ಸಮಾಜದ ತೊಡಗಿಸಿಕೊಳ್ಳುವಿಕೆ ಹೆಚ್ಚಾಗುತ್ತದೆ. ಅಧ್ಯಕ್ಷರು, ಪದಾಧಿಕಾರಿಗಳು ಈ ದಿಶೆಯಲ್ಲಿ ಚಿಂತನೆ ಮಾಡಿ ಹೆಚ್ಚಿನ ಕಾರ್ಯಕ್ರಮಗಳನ್ನು ಆಯೋಜನೆ ಮಾಡಲು ಮುಂದಾಗಬೇಕೆಂದು ಹೇಳಿದರು.

ಹಿರಿಯ ಸದಸ್ಯ, ನಿವೃತ್ತ ಮುಖ್ಯ ಶಿಕ್ಷಕ ವಂಕಲಕುಂಟಿ ಮಾತನಾಡಿ, ಯಾವುದೇ ಸಂಘಟನೆ ಬಲಯುತವಾಗಬೇಕಾದರೆ ಅದರ ಸದಸ್ಯರ ಸಂಖ್ಯೆ ಹೆಚ್ಚಿರಬೇಕು. ಪ್ರತಿ ಸಭೆಗೆ ಎಲ್ಲರೂ ಹಾಜರಿರುವಂತೆ ನೋಡಿಕೊಳ್ಳಬೇಕು. ಈ ಸಂಘಟನೆಯಿಂದ ಮುಂದಿನ ದಿನಗಳಲ್ಲಿ ಸದಸ್ಯತ್ವ ಅಭಿಯಾನವನ್ನು ನಡೆಸಿ ನರೇಗಲ್ಲ ಪಟ್ಟಣವಷ್ಟೇ ಅಲ್ಲದೆ ಸುತ್ತಲಿನ ಗ್ರಾಮಗಳಲ್ಲಿನ ನಿವೃತ್ತ ನೌಕರರನ್ನು ಮುಖತಃ ಭೇಟಿಯಾಗಿ ಅವರನ್ನೂ ಸಹ ಈ ಸಂಘದ ಸದಸ್ಯರಾಗಲು ಪದಾಧಿಕಾರಿಗಳು ಪ್ರೇರೇಪಿಸಬೇಕೆಂದರು.

ಸಂಘದ ಅಧ್ಯಕ್ಷ ಡಿ.ಎ. ಅರವಟಗಿಮಠ ಅಧ್ಯಕ್ಷತೆ ವಹಿಸಿ ಮಾತನಾಡಿ, ಇಂದಿನ ಸಭೆಯಲ್ಲಿ ಹಿರಿಯರು ಹೇಳಿದ ಸೂಚನೆಗಳನ್ನು ಪಾಲಿಸುವುದಾಗಿ ತಿಳಿಸಿದರು. ವೇದಿಕೆಯ ಮೇಲೆ ಡಾ. ಆರ್.ಕೆ. ಗಚ್ಚಿನಮಠ ಇದ್ದರು. ಸಭೆಯಲ್ಲಿ ಜಿ.ಎ. ಬೆಲ್ಲದ, ಕೆ.ಕೆ. ದಾಸರ, ಎಚ್.ಕೆ. ಜೋಗಿ, ಶಿವಯ್ಯ ಹಿರೇಮಠ, ಸಿ.ಎಂ. ಶಿಸ್ತಗಾರ, ಎಸ್.ಜಿ. ಮಾಳಗೌಡರ, ಅಂದಪ್ಪ ಕುಂಬಾರ, ವೀರಬಸಪ್ಪ ಕೊಟಗಿ ಮುಂತಾದರಿದ್ದರು. ವೀರಭದ್ರಪ್ಪ ಕೆರಿಯವರ ಸ್ವಾಗತಿಸಿ ನಿರೂಪಿಸಿದರು. ಶಿವಯೋಗಿ ಜಕ್ಕಲಿ ವಂದಿಸಿದರು.

# ಗ್ಯಾರಂಟಿ ಯೋಜನೆಗಳು ಎಲ್ಲರಿಗೂ ಅನ್ವಯ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಎಲ್ಲ ವರ್ಗಗಳ ಪರವಾಗಿ ಇರುವ ಪಕ್ಷವೆಂದರೆ ಅದು ಕಾಂಗ್ರೆಸ್ ಪಕ್ಷ. ಕಾಂಗ್ರೆಸ್ ಬಡವರಿಗಾಗಿ ನೀಡಿದ ಗ್ಯಾರಂಟಿ ಯೋಜನೆಗಳನ್ನು ಬಿಟ್ಟಿ ಭಾಗ್ಯಗಳು ಎಂದು ಟೀಕೆ ಮಾಡಿ ಬಡವರನ್ನು ಹೀಯಾಳಿಸುವ ಕಾರ್ಯವನ್ನು ಬಿಜೆಪಿ ಮಾಡುತ್ತಿದೆ ಎಂದು ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡ ಗುರುನಾಥ ದಾನಪ್ಪನವರ ಹೇಳಿದರು.

ಅವರು ಸೂರಣಗಿ ಜಿ.ಪಂ ವ್ಯಾಪ್ತಿಯ ಗ್ರಾ.ಪಂ, ತಾ.ಪಂ. ವ್ಯಾಪ್ತಿಗಳ ಗ್ರಾಮೀಣ ಪ್ರದೇಶಗಳಲ್ಲಿ ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠರ ನೇತೃತ್ವದಲ್ಲಿ ಪ್ರಚಾರ ಕಾರ್ಯವನ್ನು ಕೈಗೊಂಡು, ಆದರಹಳ್ಳಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದರು.

ಗ್ಯಾರಂಟಿ ಯೋಜನೆಗಳು ಎಲ್ಲ ಜಾತಿ, ಧರ್ಮ, ಪಕ್ಷದವರಿಗೂ ಅನ್ವಯಿಸುತ್ತವೆ.



ಕೇಂದ್ರದಲ್ಲಿ ಮನಮೋಹನ್‌ಸಿಂಗ್ ಪ್ರಧಾನಿಯಾಗಿದ್ದಾಗ ರೈತರ ಸಾಲ ಮನ್ನಾ ಮಾಡಿದ್ದರು, ಆದರೆ ಬಿಜೆಪಿ ಕೇಂದ್ರ ಸರಕಾರ ಶ್ರೀಮಂತರ, ದೊಡ್ಡ ದೊಡ್ಡ ಉದ್ಯಮಿಗಳ ಸಾಲಗಳನ್ನು ಮಾತ್ರ ಮನ್ನಾ ಮಾಡಿದೆ. ಹಾವೇರಿ ಲೋಕಸಭಾ ಕ್ಷೇತ್ರದಲ್ಲಿ ಸ್ಪರ್ಧಿಸಿರುವ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರನ್ನು ಆಯ್ಕೆ ಮಾಡಿ ಎಂದು ಮನವಿ ಮಾಡಿದರು.

ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ ಮತ್ತು ರಾಮಣ್ಣ ಲಮಾಣಿ ಮಾತನಾಡಿ, ಕಾಂಗ್ರೆಸ್ ಜನಪರ ಯೋಜನೆಗಳನ್ನು ಮನೆ ಮನೆಗೂ ಹೇಳಿ ಕಾಂಗ್ರೆಸ್ ಸಾಧನೆಯನ್ನು ತಿಳಿಸುವ ಕೆಲಸ ಕಾಂಗ್ರೆಸ್ ಕಾರ್ಯಕರ್ತರಿಂದ ಆಗಬೇಕು ಎಂದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಜಿ.ಆರ್. ಕೊಪ್ಪದ, ಶೇಖಣ್ಣ ಕಾಳೆ, ಫಕ್ಕಿರೇಶ ಮ್ಯಾಟಣ್ಣವರ, ಕೋಟೆಪ್ಪ ವರ್ದಿ, ಬಸವರಾಜ ಹೊಳಲಾಪೂರ, ಬಸವರಡ್ಡಿ ಹನುಮರಡ್ಡಿ, ರಾಜಣ್ಣ ಹೊಳಲಾಪುರ, ಶೇಖಣ್ಣ ಲಮಾಣಿ, ಯಲ್ಲಪ್ಪ ಸೂರಣಗಿ, ಮೈಲಾರಪ್ಪ ಸೇರಿದಂತೆ ನೂರಾರು ಕಾರ್ಯಕರ್ತರು ಹಾಜರಿದ್ದರು.

# ಮಹಿಳೆ ಕಾಣೆ



**■ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ನಗರದ ಕಿನ್ನಾಳ ರಸ್ತೆಯ ಭಾಗ್ಯನಗರ ಎನ್‌ಜಿಓ ಕಾಲೋನಿ ನಿವಾಸಿಯಾಗಿರುವ ಶ್ರೀಮತಿ ನೀಲಮ್ಮ ಶಿವನಗೌಡ ಪೊಲೀಸ್‌ಪಾಟೀಲ (50) ಏಪ್ರಿಲ್ 6ರಂದು ಮುಧೋಳ ತಾಲೂಕಿನ ಇಂಗಳಗಿಗೆ ಹೋಗಿ ಬರುವುದಾಗಿ ಹೇಳಿ ಮನೆಯಿಂದ ಹೋದವರು ಇದುವರೆಗೂ ವಾಪಸಾಗಿಲ್ಲ ಎಂದು ಪುತ್ರ ಬುಡ್ಡನಗೌಡ ಪೊಲೀಸ್‌ಪಾಟೀಲ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ತಾಯಿ ನೀಲಮ್ಮನವರು ಇತ್ತೀಚೆಗೆ ಮಾನಸಿಕ ಅಸ್ವಸ್ಥರಂತೆ ವರ್ತಿಸುತ್ತಿದ್ದು, ಕನ್ನಡ ಸ್ಪಷ್ಟವಾಗಿ ಮಾತನಾಡುತ್ತಾರೆ. ತಾಯಿಯವರು ಕಾಣೆಯಾದ ಕುರಿತು ಈಗಾಗಲೇ ಬಾಗಲಕೋಟೆ ಜಿಲ್ಲೆಯ ಬೀಳಗಿ ಪೊಲೀಸ್ ಠಾಣೆಯಲ್ಲಿ ಕಾಣೆಯಾಗಿರುವ ಬಗ್ಗೆ ಪ್ರಕರಣ ದಾಖಲಿಸಿದ್ದು, ಉತ್ತರ ಕರ್ನಾಟಕದ ಬಹುತೇಕ ಜಿಲ್ಲೆಗಳಲ್ಲಿ ಹುಡುಕಲಾಗಿದ್ದು ಪತ್ತೆಯಾಗಿಲ್ಲ ಎಂದು ಅಳಲು ತೋಡಿಕೊಂಡಿದ್ದಾರೆ.

ಮನೆಯಿಂದ ಹೊರಡುವಾಗ ಗುಲಾಬಿ ಬಣ್ಣದ ಸೀರೆ, ತಿಳಿ ಹಸಿರು ಜಂಪರ್ ಧರಿಸಿದ್ದು ಇವರ ಬಗ್ಗೆ ಯಾರಿಗಾದರೂ ಮಾಹಿತಿ ಸಿಕ್ಕಲ್ಲಿ ಕೂಡಲೇ ಬುಡ್ಡನಗೌಡ ಪೊಲೀಸ್‌ಪಾಟೀಲ (ಮೊಬೈಲ್: 7411142373) ಸಂಪರ್ಕಿಸಲು ಅವರು ಕೋರಿದ್ದಾರೆ.

### ಚಿಲಿಪಿಲಿ ಮಕ್ಕಳ ಶಿಕ್ಷಣ, ಸರ್ವಾಂಗೀಣ ಅಭಿವೃದ್ಧಿ ಸಂಸ್ಥೆಯ ಬೇಸಿಗೆ ಶಿಬಿರದ ಸಮಾರೋಪ

# ಮಕ್ಕಳು ವೈಚಾರಿಕ ಶಕ್ತಿಯನ್ನೇ ಕಳೆದುಕೊಂಡಿದ್ದಾರೆ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಇಂದು ಮಕ್ಕಳನ್ನು ನೋಡಿಕೊಳ್ಳುವುದು ಒಂದು ಸವಾಲಿನ ಕಾರ್ಯವಾಗಿದೆ ಎಂದು ದಾಂಡೇಲಿಯ ಸರಕಾರಿ ಪ್ರಥಮದರ್ಜೆ ಕಾಲೇಜಿನ ಕನ್ನಡ ಪ್ರಾಧ್ಯಾಪಕಿ ವಿನಯಾ ಒಕ್ಕುಂದ ಹೇಳಿದರು.

ಅವರು ಚಿಲಿಪಿಲಿ ಮಕ್ಕಳ ಶಿಕ್ಷಣ ಹಾಗೂ ಸರ್ವಾಂಗೀಣ ಅಭಿವೃದ್ಧಿ ಸಂಸ್ಥೆ, ಧಾರವಾಡ ವತಿಯಿಂದ ಆಯೋಜಿಸಿದ್ದ 22ನೇ ವರ್ಷದ 'ಚಿಲಿಪಿಲಿ ಕಲರವ' ಮಕ್ಕಳ ಬೇಸಿಗೆ ಶಿಬಿರದ ಸಮಾರೋಪ ಸಮಾರಂಭದಲ್ಲಿ 'ಚಿಲಿಪಿಲಿ ಮಕ್ಕಳ ಪ್ರತಿಭೋತ್ಸವ' ಉದ್ಘಾಟಿಸಿ ಮಾತನಾಡುತ್ತಿದ್ದರು.

ಇಂದು ಮಕ್ಕಳ ಮೇಲೆ ತುಂಬಾ ಒತ್ತಡವಿದೆ ಎಂಬುದನ್ನು ಪಾಲಕರು ಅರ್ಥಮಾಡಿಕೊಳ್ಳಬೇಕು. ಮಕ್ಕಳಿಗೆ ಯೋಚನೆ ಮಾಡುವ ಅವಕಾಶವೇ ಇಲ್ಲದಾಗಿದೆ. ಪ್ರಸ್ತುತ ದಿನಗಳಲ್ಲಿ ಮಕ್ಕಳು ವಿಚಾರ ಮಾಡುವ ಶಕ್ತಿಯನ್ನೇ ಕಳೆದುಕೊಂಡಿದ್ದಾರೆ. ಯಾವುದು ತಪ್ಪು, ಯಾವುದು ಸರಿ ಎಂದು ತಿಳಿದುಕೊಳ್ಳುವ ವ್ಯವಧಾನ ಇಲ್ಲದಾಗಿದೆ. ಮನುಷ್ಯರನ್ನು ಮನುಷ್ಯರನ್ನಾಗಿ



ನೋಡುವುದನ್ನೇ ಬಿಡುವಂತಹ ರೋಗಗ್ರಸ್ಥ ಸಮಾಜದಲ್ಲಿ ನಾವಿದ್ದೇವೆ. ಇಂಥ ಕಾಲಘಟ್ಟದಲ್ಲಿ ನಮ್ಮ ಮಕ್ಕಳಲ್ಲಿ ಒಟ್ಟಿಗೆ ಬಾಳುವ, ಸಹಬಾಳ್ವೆಯಿಂದ ನಡೆದುಕೊಳ್ಳುವ ಗುಣಗಳನ್ನು ಕಟ್ಟಿಕೊಡಬೇಕಾಗಿದೆ.

ಕುಟುಂಬವು ಮಕ್ಕಳ ಅರೋಗ್ಯ, ಹಸಿವನ್ನು ನೀಗಿಸಿ ದೈಹಿಕ ಬೆಳವಣಿಗೆಗೆ ಲಕ್ಷ್ಯ ಕೊಡುತ್ತದೆ. ಆದರೆ ಮನುಷ್ಯತ್ವವನ್ನು ಬೆಳೆಸುವ ನಿಟ್ಟಿನಲ್ಲಿ ಕುಟುಂಬ ಮತ್ತು ಶಾಲೆಗಳು ಹಿಮ್ಮುಖವಾಗಿವೆ. ಇದರ ಪರಿಣಾಮ ಇಂದು ಸಮಾಜದಲ್ಲಿ ಯುವಕರ ಮನಸ್ಥಿತಿ ನೋಡುತ್ತೇವೆ. ಅತ್ಯಂತ ಬುದ್ಧಿವಂತ ಮಕ್ಕಳು ಇದ್ದರೂ ಕೂಡಾ ಅವರಲ್ಲಿ ಮನುಷ್ಯತ್ವ ಗುಣ ಇರುವುದಿಲ್ಲ. ಇಂಥ ಮನುಷ್ಯತ್ವ, ಭಾವನಾತ್ಮಕ, ಸಹಬಾಳ್ವೆಯ ಪರಿಕಲ್ಪನೆಯನ್ನು ಇಂಥ ಮಕ್ಕಳ ಶಿಬಿರಗಳು ಕಟ್ಟಿಕೊಡುತ್ತಿರುವುದು ಅಭಿನಂದನೀಯ. ಈ ಕಾರಣಕ್ಕಾಗಿಯೇ ಮಕ್ಕಳ ಶಿಬಿರಗಳು ಇಂದು ಮುಖ್ಯವಾಗಿವೆ ಎಂದರು.

ಅತಿಥಿಗಳಾಗಿ ಬಿಎಸ್‌ಎನ್‌ಎಲ್ ನಿವೃತ್ತ ಅಧಿಕಾರಿ ಯಲ್ಲಪ್ಪ ಬೆಂಡಿಗೇರಿ, ಟೆಲಿಕಾಂ ಅಧಿಕಾರಿ ಶಿಲ್ಪಾರಾಣಿ ಚೆಲ್ಲೂರ, ಎಲ್‌ಐಸಿ ಅಧಿಕಾರಿ ಆಕಾಶ ಹುಬ್ಬಳ್ಳಿ ಕಾರ್ಯಕ್ರಮದಲ್ಲಿದ್ದರು. ಅಧ್ಯಕ್ಷತೆ ವಹಿಸಿ ಚಿಲಿಪಿಲಿ ಸಂಸ್ಥೆಯ ಅಧ್ಯಕ್ಷ ಶಂಕರ ಹಲಗತ್ತಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಕೆ.ಎಚ್. ನಾಯಕ, ಡಾ.ಬಾಳಪ್ಪಾ ಚಿನಗುಡಿ, ಸಿಕಂದರ ದಂಡಿನ, ಸೋಮು ಕಾರಿಗನೂರು, ಭಾಸ್ಕರ ಪುಟ್ಟಣ್ಣ, ಪ್ರಮೀಣಾ ಜಕ್ಕಣ್ಣವರ, ಶೃತಿ ಹುರುಳಿಕೊಪ್ಪ, ಮಲ್ಲನಗೌಡ ಪಾಟೀಲ, ಡಾ.ಅಲ್ಲಾಭಕ್ಷ ಮಕಾನದಾರ, ಅಪ್ರೀನ್ ಬಾನು ಜಕಾತಿ, ನೇತ್ರಾ ಪವಾರ, ಮಂಜುನಾಥ ಬಡಿಗೇರ ಹಾಗೂ ರೇಷ್ಮಾ ತಸಿಲ್ದಾರ್ ಇದ್ದರು.

ಮಕ್ಕಳನ್ನು ಸಾಕಿ ಸಲುಹುವ ಅತ್ಯಂತ ಕಠಿಣವಾದ ಜವಾಬ್ದಾರಿಯನ್ನು ಸಮಾಜವು ಮಹಿಳೆಯರಿಗೆ ನೀಡಿದ್ದು, ಅದನ್ನು ಸಮರ್ಥವಾಗಿ ನಿಭಾಯಿಸುತ್ತಾ ಮಹಿಳಾ ಲೋಕ ಬಂದಿದೆ. ನಾವು ವಿಮಾನ ತಯಾರು ಮಾಡುವುದರಿಂದ ಹಿಡಿದು ಎಲ್ಲ ವಸ್ತುವನ್ನು ತಯಾರು ಮಾಡಬಹುದು. ಆದರೆ ಒಂದು ಮಗುವನ್ನು ಮನುಷ್ಯರನ್ನಾಗಿ ಬೆಳೆಸುವಂತಹ ಜಗತ್ತಿನ ಅತ್ಯಂತ ಕಠಿಣ ಕೆಲಸವನ್ನು ತಾಯಂದಿರು ಮಾಡುತ್ತಾ ಬಂದಿದ್ದಾರೆ ಎಂದು ವಿನಯಾ ಒಕ್ಕುಂದ ಅಭಿಪ್ರಾಯಪಟ್ಟರು.

22, 30ನೇ ವಾರ್ಡ್‌ಗಳಲ್ಲಿ ಆನಂದಸ್ವಾಮಿ ಗಡ್ಡದೇವರಮಠ ಪರ ಸಚಿವ ಎಚ್.ಕೆ. ಪಾಟೀಲ ಪ್ರಚಾರ

# ಕಾಂಗ್ರೆಸ್ ಯೋಜನೆಗಳಿಂದ ಆರ್ಥಿಕ ಸಮೃದ್ಧಿಯಾಗಿದೆ



■ ವಿಜಯಸಾಕ್ಷಿ ಸುದ್ದಿ, ಗದಗ

ಜಾತಿ, ಮತ, ಪಕ್ಷ ಹಾಗೂ ಪಂಗಡ ಮೀರಿ ಸರ್ವರಿಗೂ ಗ್ಯಾರಂಟಿ ಯೋಜನೆಗಳನ್ನು ತಲುಪಿಸಿದ ಹೆಗ್ಗಳಿಕೆ ಕಾಂಗ್ರೆಸ್ ಪಕ್ಷಕ್ಕೆ ಸಲ್ಲುತ್ತದೆ. ಪ್ರಸ್ತುತ ನಡೆಯುತ್ತಿರುವ ಲೋಕಸಭೆ ಚುನಾವಣೆ ಬದುಕು-ಭಾವನೆ, ಶ್ರೀಮಂತ-ಬಡವರ ನಡುವಿನ ಚುನಾವಣೆಯಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನಗರದ 22 ಹಾಗೂ 30ನೇ ವಾರ್ಡ್‌ಗಳಲ್ಲಿ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರ ಪರವಾಗಿ ಜರುಗಿದ ಚುನಾವಣಾ ಪ್ರಚಾರ ಸಭೆಯಲ್ಲಿ ಅವರು ಮಾತನಾಡಿದರು.

ಗ್ಯಾರಂಟಿ ಯೋಜನೆಯಿಂದ ಬಂದ ಹಣವನ್ನು ಬಡವರು ಮಕ್ಕಳ ಆರೋಗ್ಯ ತಪಾಸಣೆ, ಔಷಧಿ ಖರೀದಿ ಸೇರಿ ದಿನನಿತ್ಯ ಬಳಕೆ ಹಾಗೂ ಹಬ್ಬದ ಸಂದರ್ಭಗಳಲ್ಲಿ ಸಾಮಗ್ರಿಗಳ ಖರೀದಿಗೆ ಆರ್ಥಿಕವಾಗಿ ಸಹಾಯವಾಗಿದೆ. ಬಡವರು, ಮಹಿಳೆಯರು ಗ್ಯಾರಂಟಿ ಯೋಜನೆಗಳನ್ನು ಸ್ವಾಗತಿಸಿದ್ದಾರೆ. ಅದರ ಪರಿಣಾಮವಾಗಿ ಪ್ರತಿಯೊಂದು ಕುಟುಂಬದ ಮಹಿಳೆಯರು ಮನೆಯಲ್ಲಿರುವ ಪುರುಷರ, ಮಕ್ಕಳಿಗೆ ಮನವರಿಕೆ ಮಾಡಿ ಕಾಂಗ್ರೆಸ್ ಪಕ್ಷಕ್ಕೆ ಮತ ನೀಡುವಂತೆ ಪ್ರೇರೇಪಿಸಬೇಕು ಎಂದರು.

ಮಾಜಿ ಶಾಸಕ ಡಿ.ಆರ್. ಪಾಟೀಲ, ವೈದ್ಯ ಡಾ. ಕಬಾಡಿ ಮಾತನಾಡಿದರು. ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಶಹರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬಿ.ಬಿ. ಅಸೂಟಿ, ಮಾಜಿ ಅಧ್ಯಕ್ಷ ಪ್ರಭು ಬುರಬುರೆ, ಮುಖಂಡರಾದ ಆಂಜನೇಯ ಕಟಗಿ, ರಮೇಶ ಮುಳಗುಂದ, ಜಿ.ಎಂ. ದಂಡಿನ, ನಾಗರಡ್ಡಿ ನಿಡಗುಂದಿ, ಮಾಯಪ್ಪ ಪೂಜಾರ, ವಿಜಯ ಮುಳಗುಂದ, ಗಾಳೆಪ್ಪ ಲಕ್ಷ್ಮೇಶ್ವರ, ಮುಖಂಡರಾದ ವಿರೂಪಾಕ್ಷಪ್ಪ ಅಕ್ಕಿ, ರವಿ ಕಮತರ, ಅಕ್ಬರಸಾಬ್ ಬಬರ್ಚಿ, ಎಸ್.ಆರ್. ಹಿರೇಮಠ, ಎಸ್.ಎಸ್. ಬಿಜಾಪುರ, ಆರ್.ಎಚ್. ತೋರಗಲ್ಲ, ಎಂ.ಟಿ. ಹೆಸರೂರ, ಐ.ಜಿ. ಪಠಾಣ್, ಜಿ.ಸಿ. ಮುಲ್ಲಾ, ಇಸ್ಮಾಯಿಲ್ ರೋಣದ, ದಾವೂದ್‌ಅಲಿ ಉಳ್ಳಾಗಡ್ಡಿ, ದಾವೂದಸಾಬ್ ಕುರಹಟ್ಟಿ ಸೇರಿ ಅನೇಕರಿದ್ದರು.

ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಮಾತನಾಡಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಸ್ಥಾಪಿಸಿ ದೂರದೃಷ್ಟಿ ಮೆರೆದ, ಗದಗ ಜಿಲ್ಲೆಯನ್ನು ಅಭಿವೃದ್ಧಿಗೊಳಿಸಿದ ಸಚಿವ ಎಚ್.ಕೆ. ಪಾಟೀಲ ಅವರ ಮಾರ್ಗದರ್ಶನದಲ್ಲಿ ಮುಂದುವರಿಯುವೆ. ತಮ್ಮ ಸಲಹೆಗಳನ್ನು ಸದಾ ಸ್ವೀಕರಿಸಿ ಸಾಗುವೆ ಎಂದರು.

ಮತದಾರರಿಗೆ ವೋಟರ್ ಸ್ಲಿಪ್, ಮತದಾನ ಮಾಹಿತಿ ತಲುಪಿರುವ ಬಗ್ಗೆ ಡಿಸಿ ಪರಿಶೀಲನೆ

# ಪ್ರತಿಯೊಬ್ಬರೂ ಮುಕ್ತವಾಗಿ ಮತ ಚಲಾಯಿಸಿ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಧಾರವಾಡ ಲೋಕಸಭಾ ಮತಕ್ಷೇತ್ರದ ಸಾರ್ವತ್ರಿಕ ಚುನಾವಣೆಯಲ್ಲಿ ಮತದಾನ ಹೆಚ್ಚಳಕ್ಕೆ ಚುನಾವಣಾ ಆಯೋಗದ ನಿರ್ದೇಶನದಂತೆ ಧಾರವಾಡ ಜಿಲ್ಲಾಡಳಿತ ಮತ್ತು ಜಿಲ್ಲಾ ಸ್ವಿಪ್ ಸಮಿತಿಯು ವಿವಿಧ ಕಾರ್ಯಗಳ ಮೂಲಕ ನಿರಂತರವಾಗಿ ಪ್ರಯತ್ನಿಸುತ್ತಿದೆ.

ಧಾರವಾಡ ಜಿಲ್ಲಾಧಿಕಾರಿಗಳ ಕಚೇರಿಯ ಬಹುತೇಕ ಅಧಿಕಾರಿ, ಸಿಬ್ಬಂದಿಗಳು ಕಳೆದ ಹಲವು ತಿಂಗಳಿಂದ ಜಿಲ್ಲಾ ಚುನಾವಣಾಧಿಕಾರಿಗಳೂ ಆಗಿರುವ ಜಿಲ್ಲಾಧಿಕಾರಿಗಳ ಮಾರ್ಗದರ್ಶನದಲ್ಲಿ ಚುನಾವಣಾ ಸಿದ್ಧತೆಯಲ್ಲಿ ತೊಡಗಿದ್ದಾರೆ.

ಜಿಲ್ಲಾ ಚುನಾವಣಾಧಿಕಾರಿಗಳೂ ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಮಂಗಳವಾರ ಬೆಳಿಗ್ಗೆ ಧಾರವಾಡ ನಗರದ ಗೊಲ್ಲರ ಕಾಲೋನಿ, ಮೇದಾರ ಓಣಿ ಮುಂತಾದ ಪ್ರದೇಶಗಳಲ್ಲಿ ಮನೆಮನೆಗೆ ಭೇಟಿ ನೀಡಿ, ಮತದಾರರಿಗೆ ವೋಟರ್ ಸ್ಲಿಪ್ ತಲುಪಿರುವ ಬಗ್ಗೆ ಖಚಿತಪಡಿಸಿಕೊಂಡರು.

ಗೊಲ್ಲರ ಓಣಿ ಮತದಾರರಾದ ಮನೆಗಳಲ್ಲಿನ ವೋಟರ್ ಸ್ಲಿಪ್ ಪರಿಶೀಲಿಸಿ, ಅವರೊಂದಿಗೆ ಮತದಾರ ಗುರುತಿನ ಪತ್ರ, ಮತಗಟ್ಟೆಗಳಲ್ಲಿನ ಸೌಲಭ್ಯಗಳ



ಬಗ್ಗೆ ಮಾಹಿತಿ ಹಂಚಿಕೊಂಡರು. ಯಾವುದೇ ಭಯ, ಆತಂಕಗಳಿಲ್ಲದೆ ಮುಕ್ತವಾಗಿ ಮತಗಟ್ಟೆಗೆ ಬಂದು ಮತ ಚಲಾಯಿಸುವಂತೆ ಜಿಲ್ಲಾಧಿಕಾರಿಗಳು ತಿಳಿಸಿದರು.

ಜಿಲ್ಲೆಯಲ್ಲಿರುವ 1660 ಮತಗಟ್ಟೆಗಳಲ್ಲಿ ಇರುವ ಪ್ರತಿ ಮತಗಟ್ಟೆ ಮಟ್ಟದ ಅಧಿಕಾರಿಗಳು, ತಮ್ಮ ಮತಗಟ್ಟೆ ವ್ಯಾಪ್ತಿಯ ಪ್ರತಿ ಮನೆಗೆ ಭೇಟಿ ನೀಡಿ, ಪ್ರತೀ ಮತದಾರನಿಗೆ ವೋಟರ್ ಸ್ಲಿಪ್, ಪ್ರತೀ ಕುಟುಂಬಕ್ಕೆ ಮತದಾನ ಮಾಹಿತಿ ಇರುವ ಒಂದು ವೋಟರ್ ಗೈಡ್ ವಿತರಿಸುತ್ತಿದ್ದು, ಇದು ತಲುಪಿರುವ ಬಗ್ಗೆ ಜಿಲ್ಲಾಧಿಕಾರಿಗಳು ಮಾಹಿತಿ ಪಡೆದುಕೊಂಡರು.

ಮೊದಲ ಬಾರಿಗೆ ಮತ ಚಲಾಯಿಸಲಿರುವ 18 ರಿಂದ 19 ವರ್ಷದೊಳಗಿನ ನವಯುವ ಮತದಾರರಿಗೆ ವೋಟರ್ ಸ್ಲಿಪ್‌ನೊಂದಿಗೆ ಜಿಲ್ಲಾ ಚುನಾವಣಾಧಿಕಾರಿಗಳಿಂದ ವಿಶೇಷವಾಗಿ ಶುಭಾಶಯ ಪತ್ರವನ್ನು ಸಹ ತಲುಪಿಸಲಾಗುತ್ತಿದೆ. ಈ ಕುರಿತು ಪರಿಶೀಲಿಸಿ, ನವ ಮತದಾರರನ್ನು ಮತದಾನಕ್ಕೆ ಬರುವಂತೆ ಪ್ರೇರಣೆ ನೀಡಿದರು.

ಪರ ಊರು, ಪರಸ್ಥಳಗಳಿಗೆ ತೆರಳಿರುವ ಮತ್ತು ಇತರ ಕಾರಣಗಳಿಂದ ಬಿಎಲ್‌ಓಗಳ ಸಂಪರ್ಕಕ್ಕೆ ಸಿಗದಿರುವ ಮತದಾರರಿಗೆ ಮತದಾನದ ದಿನದಂದು ಮತಗಟ್ಟೆ ವ್ಯಾಪ್ತಿಯ ನೂರು ಮೀಟರ್ ಒಳಗಡೆ ವೋಟರ್ ಹೆಲ್ಪ್‌ಡೆಸ್ಕ್ ತೆರೆದು, ಮತದಾರರಿಗೆ ವೋಟರ್ ಸ್ಲಿಪ್, ಮತದಾನ ಮಾಡುವ ಬಗ್ಗೆ ಮಾಹಿತಿ ನೀಡುವ ವ್ಯವಸ್ಥೆ ಮಾಡಲಾಗುತ್ತದೆ ಎಂದು ಜಿಲ್ಲಾ ಚುನಾವಣಾಧಿಕಾರಿ ದಿವ್ಯ ಪ್ರಭು ಮಾಹಿತಿ ನೀಡಿದರು.


ಮತದಾರರು ತಮ್ಮ ಹೆಸರು ಮತದಾರ ಪಟ್ಟಿಯಲ್ಲಿ ಇರುವ ಕುರಿತು ಖುದ್ದು ಪರಿಶೀಲಿಸಬಹುದು. ಮತದಾರ ಸಹಾಯವಾಣಿ 1950ಗೆ ಕರೆ ಮಾಡಿ, ತಿಳಿಯಬಹುದು. ಹಾಗೂ ತಿರಣಜಢಿ.ಜಭಿ.ರಠತಿ.ಎಟಿ ದಲ್ಲಿ ಛಿಜಾ.ಇಚಿಡಿಟಿಚಿಣಚಿಇಚಿ.ರಠತಿ.ಎಟಿ ದಲ್ಲಿಯೂ ಪರಿಶೀಲಿಸಬಹುದು. ಮತದಾರ ತನ್ನ ಮತ ಚಲಾಯಿಸಲು ಸಂಬಂಧಪಟ್ಟ ಮತಗಟ್ಟೆಯ ಮತದಾರ ಪಟ್ಟಿಯಲ್ಲಿ ಹೆಸರು ಇರುವುದು ಕಡ್ಡಾಯ. ಮತದಾರ ಪಟ್ಟಿಯಲ್ಲಿ ಹೆಸರು ಇದ್ದರೆ ಮಾತ್ರ ಮತ ಚಲಾಯಿಸಲು ಸಾಧ್ಯವಾಗುತ್ತದೆ. ಇಲ್ಲದಿದ್ದರೆ ಅವಕಾಶ ಸಿಗುವದಿಲ್ಲ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

# ಯುವಕರಿಗಾಗಿ ಕಾಂಗ್ರೆಸ್ 'ಯುವ ನ್ಯಾಯ' ಯೋಜನೆ

■ ವಿಜಯಸಾಕ್ಷಿ ಸುದ್ದಿ, ಗದಗ

ಈಗಾಗಲೇ ರಾಜ್ಯದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರ ನೇತೃತ್ವದ ಸರ್ಕಾರವು ಯುವಕರಿಗಾಗಿ 'ಯುವ ನಿಧಿ' ಕಾರ್ಯರೂಪಕ್ಕೆ ತಂದಿದ್ದು, ಕೇಂದ್ರದಲ್ಲೂ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ 'ಯುವ ನ್ಯಾಯ' ಯೋಜನೆ ಜಾರಿಯಾಗಲಿದೆ. ಹೀಗಾಗಿ ಯುವಕರು ಪ್ರಸ್ತುತ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಿ, ಗೆಲ್ಲಿಸುವಂತೆ ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ಮನವಿ ಮಾಡಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ದೇಶದಲ್ಲಿ ಕಾಂಗ್ರೆಸ್ ಸರ್ಕಾರ ರಚನೆಯಾದರೆ ಸರ್ಕಾರದಲ್ಲಿ ಖಾಲಿ ಇರುವ ಉದ್ಯೋಗಗಳನ್ನು ಅಗತ್ಯಕ್ಕೆ ತಕ್ಕಂತೆ ಭರ್ತಿ ಮಾಡುವುದರ ಜತೆಗೆ 40 ವರ್ಷದೊಳಗಿನ ಯುವಕರು ಸ್ವಂತ ಉದ್ಯಮ ಆರಂಭಿಸಲು ಮುಂದಾದರೆ ಹಣಕಾಸಿನ ನೆರವು ಸಿಗಲಿದೆ. 25 ವರ್ಷಕ್ಕಿಂತ ಕಡಿಮೆ ವಯಸ್ಸಿನ ಪ್ರತಿಯೊಬ್ಬ ಡಿಪ್ಲೊಮಾ ಹೊಂದಿರುವವರು ಅಥವಾ ಕಾಲೇಜು ಪದವೀಧರರಿಗೆ ಖಾಸಗಿ ಅಥವಾ ಸಾರ್ವಜನಿಕ ವಲಯದ ಕಂಪನಿಯಲ್ಲಿ ಒಂದು ವರ್ಷದ ಶಿಷ್ಯವೃತ್ತಿಯನ್ನು ಒದಗಿಸಲು ಹೊಸ ಅಪ್ರೆಂಟಿಸ್‌ಶಿಪ್ ಕಾಯಿದೆಯನ್ನು ಕಾಂಗ್ರೆಸ್ ಖಾತರಿಪಡಿಸುತ್ತದೆ. ಅಪ್ರೆಂಟಿಸ್‌ಗಳು ವರ್ಷಕ್ಕೆ 11 ಲಕ್ಷ ಪಡೆಯುತ್ತಾರೆ. ಅಪ್ರೆಂಟಿಸ್‌ಶಿಪ್ ಕೌಶಲ್ಯಗಳನ್ನು ನೀಡುತ್ತದೆ, ಉದ್ಯೋಗವನ್ನು ಹೆಚ್ಚಿಸುತ್ತದೆ ಮತ್ತು ಲಕ್ಷಾಂತರ ಯುವಕರಿಗೆ ಪೂರ್ಣ ಸಮಯದ ಉದ್ಯೋಗ ಅವಕಾಶಗಳನ್ನು ಒದಗಿಸುತ್ತದೆ.



ದೇಶದಲ್ಲಿ ಯುವಕರು ಕಾಂಗ್ರೆಸ್ ಬೆಂಬಲಿಸಿ, ಅಧಿಕಾರಕ್ಕೆ ತಂದರೆ ಸರ್ಕಾರಿ ಪರೀಕ್ಷೆಗಳು ಮತ್ತು ಸರ್ಕಾರಿ ಹುದ್ದೆಗಳಿಗೆ ಅರ್ಜಿ ಶುಲ್ಕವನ್ನು ರದ್ದುಗೊಳಿಸಲಿವೆ. ಜೊತೆಗೆ 21 ವರ್ಷದೊಳಗಿನ ಪ್ರತಿಭಾವಂತ ಮತ್ತು ಉದಯೋನ್ಮುಖ ಕ್ರೀಡಾಪಟುಗಳಿಗೆ ಮಾಸಿಕ 10,000 ರೂ.ನಂತೆ ಕ್ರೀಡಾ ವಿದ್ಯಾರ್ಥಿವೇತನವನ್ನು ನೀಡಲಿದೆ ಎಂದು ಅಶೋಕ ಮಂದಾಲಿ ಹೇಳಿದ್ದಾರೆ.

ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ 2024-25ನೇ ಸಾಲಿಗೆ 3 ವರ್ಷಗಳ ಕೋರ್ಸ್

# ಡಿಪ್ಲೋಮಾ ಕೋರ್ಸ್‌ಗೆ ಅರ್ಜಿಗಳ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನ ಶೈಕ್ಷಣಿಕ ಅವಧಿಗೆ ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ ಡಿಪ್ಲೋಮಾ (ಡಿ.ಹೆಚ್.ಟಿ.ಟಿ) ಕೋರ್ಸ್ ಕಲಿಕೆಗಾಗಿ 44 ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಅರ್ಹ ಅಭ್ಯರ್ಥಿಗಳಿಂದ ಈ ಕೆಳಕಂಡ ಸಂಸ್ಥೆಗಳಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ವ್ಯಾಸಂಗದ ಸಮಯದಲ್ಲಿ ಮಾರ್ಗಸೂಚಿಯ ಪ್ರಕಾರ ಪ್ರತಿ ವಿದ್ಯಾರ್ಥಿಗೆ ಪ್ರತಿ ತಿಂಗಳು ರೂ.2,500ರಂತೆ ಶಿಷ್ಯವೇತನ ನೀಡಲಾಗುವುದು ಹಾಗೂ ಪುರುಷ ಅಭ್ಯರ್ಥಿಗಳಿಗೆ ವಸತಿ ನಿಲಯದ ಸೌಲಭ್ಯವನ್ನು ಹಣ ಪಾವತಿಸುವ ಆಧಾರದ ಮೇಲೆ ಕಲ್ಪಿಸಲಾಗುವುದು.

ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಇಂಗ್ಲೀಷ್‌ನ್ನು ಒಂದು ವಿಷಯವಾಗಿ ಅಭ್ಯಸಿಸಿ ಉತ್ತೀರ್ಣರಾಗಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ದಿ. 1-07-2024ಕ್ಕೆ ಅನ್ವಯಿಸುವಂತೆ ಸಾಮಾನ್ಯ ವರ್ಗದ ಅಭ್ಯರ್ಥಿಗಳು 15ರಿಂದ 23ರ ವಯೋಮಿತಿಯಲ್ಲಿರಬೇಕು ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು 15ರಿಂದ 25ರ ವಯೋಮಿತಿಯಲ್ಲಿರಬೇಕು. ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಕ್ರೋಢೀಕೃತ ಅಂಕಗಳು ಮೆರಿಟ್ ಲೆಕ್ಕಾಚಾರಕ್ಕೆ ಆಧಾರವಾಗಿರುತ್ತವೆ.

**ಡಿಪ್ಲೋಮಾ ಕೋರ್ಸ್‌ಗಾಗಿ ಲಭ್ಯವಿರುವ ಸಂಸ್ಥೆಗಳ ವಿವರ:** ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಗದಗ-ಬೆಟಗೇರಿ-22 ಅಭ್ಯರ್ಥಿಗಳು, ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಸೇಲಂ (ತಮಿಳುನಾಡು)- 17 ಅಭ್ಯರ್ಥಿಗಳು, ಎಸ್.ಪಿ.ಕೆ.ಎಂ. ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ ವೆಂಕಟಗಿರಿ (ನೆಲ್ಲೂರು ಜಿಲ್ಲೆ, ಆಂಧ್ರಪ್ರದೇಶ) -3 ಅಭ್ಯರ್ಥಿಗಳು, ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಕಣ್ಣೂರು (ಕೇರಳ)-2 ಅಭ್ಯರ್ಥಿಗಳು.

ಮೆರಿಟ್ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳನ್ನು ಆಯಾ ಡಿಪ್ಲೋಮಾ ಸಂಸ್ಥೆಗಳಲ್ಲಿ ಕೋರ್ಸ್ ಪ್ರವೇಶ ಕುರಿತಂತೆ ಕೌನ್ಸಿಲಿಂಗ್‌ಗಾಗಿ ಕರೆಯಲಾಗುವುದು. ಆಸಕ್ತಿ ಇರುವ ಅಭ್ಯರ್ಥಿಗಳು ಹೆಚ್ಚಿನ ವಿವರಗಳಿಗಾಗಿ ಮತ್ತು ಅರ್ಜಿ ಫಾರಂಗಳಿಗಾಗಿ ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ-ಬೆಟಗೇರಿ ದೂರವಾಣಿ ಸಂ-08372-297221 ಮೊಬೈಲ್ ಸಂಖ್ಯೆ-9449162822 ಅಥವಾ ಉಪ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಜಿಲ್ಲಾ ಪಂಚಾಯತ್, ಗದಗ ಮೊಬೈಲ್ ಸಂಖ್ಯೆ-9980208292, 9916582238 ಇವರುಗಳನ್ನು ಸಂಪರ್ಕಿಸಿ ಪಡೆಯಬಹುದಾಗಿದೆ.

ಅರ್ಜಿಗಳನ್ನು ಆನಲೈನ್‌ನಲ್ಲಿ ಡೌನಲೊಡ್ ಮಾಡಿಕೊಳ್ಳಲು ಲಿಂಕ್ https://khtigadag.ac.in/AdmissionForm.pdf. ಪೂರ್ಣವಾಗಿ ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲಾತಿಗಳೊಂದಿಗೆ ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ-ಬೆಟಗೇರಿ-582102 ಇವರಿಗೆ ಸಲ್ಲಿಸಲು ಕೊನೆಯ ದಿನಾಂಕ-31-05-2024 ಆಗಿದೆ ಎಂದು ಪ್ರಕಟಣೆ ತಿಳಿಸಿದೆ.

ನಿವೃತ್ತಿ ಹೊಂದಿ ತಾಯ್ನಾಡಿಗೆ ಆಗಮಿಸುತ್ತಿರುವ ಬೆಟಗೇರಿಯ ಹಾನರಿ ಲೆಫ್ಟಿನೆಂಟ್

# ವಾಸುದೇವ್ ಸಿ.ಪೋತ್ತಿಯವರಿಗೆ ಸ್ವಾಗತ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ತಾಲೂಕ ಬೆಟಗೇರಿ ಗ್ರಾಮದ ಹಾನರಿ ಲೆಫ್ಟಿನೆಂಟ್ ವಾಸುದೇವ್ ಸಿ.ಪೋತ್ತಿ ಅವರು ಸತತವಾಗಿ 28 ವರ್ಷಗಳ ಕಾಲ ತಮ್ಮ ಅಮೋಘ ಸೇವೆಯನ್ನು ಸಲ್ಲಿಸಿ, ನಿವೃತ್ತಿ ಪಡೆದು ಮೇ 2ರಂದು ಬೆಳಿಗ್ಗೆ 9 ಗಂಟೆಗೆ ತಮ್ಮ ಸ್ವ-ಗ್ರಾಮಕ್ಕೆ ಆಗಮಿಸುತ್ತಿದ್ದಾರೆ.

ಬೆಟಗೇರಿಯ ಹೆಮ್ಮೆಯ ಪುತ್ರರಾದ ಹಾನರಿ ಲೆಫ್ಟಿನೆಂಟ್ ವಾಸುದೇವ್ ಚಿದಾನಂದಪ್ಪ ಪೋತ್ತಿ ಇವರಿಗೆ ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘ ಗದಗಿನ ಅಧ್ಯಕ್ಷರು ಮತ್ತು ಪದಾಧಿಕಾರಿಗಳು, ಸರ್ವ ಸದಸ್ಯರ ಪರವಾಗಿ, ಪೋತ್ತಿ ಬಂಧು-ಬಳಗದ ವತಿಯಿಂದ ಹಾಗೂ ಗದಗ-ಬೆಟಗೇರಿಯ ಸಮಸ್ತ ಗುರು-ಹಿರಿಯರು ಹಾನರಿ ಲೆಫ್ಟಿನೆಂಟ್ ಪೋತ್ತಿ ಅವರಿಗೆ ಹಾರ್ದಿಕ ಸ್ವಾಗತ ಕೋರಿದ್ದಾರೆ.

ಅಂದು ಬೆಳಿಗ್ಗೆ 9 ಗಂಟೆಗೆ ಗದಗಿನ ರೈಲ್ವೆ ನಿಲ್ದಾಣದಿಂದ ಬೆಟಗೇರಿಯ ಅಂಬಾಭವಾನಿ ದೇವಸ್ಥಾನದವರೆಗೆ ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘ ಗದಗ ಜಿಲ್ಲಾ ಘಟಕದವರು ಹಾನರಿ ಲೆಫ್ಟಿನೆಂಟ್ ಪೋತ್ತಿ ಅವರನ್ನು ತೆರೆದ ವಾಹನದಲ್ಲಿ ಭವ್ಯ ಮೆರವಣಿಗೆಯ ಮುಖಾಂತರ ಕರೆತರಲಿದ್ದಾರೆ. ಈ ಸ್ವಾಗತ ಕಾರ್ಯಕ್ರಮದಲ್ಲಿ ಗದಗ ಜಿಲ್ಲಾ ಹಾಲಿ ಮತ್ತು ಮಾಜಿ ಸೈನಿಕ, ಅರೆ ಸೈನಿಕ ಮತ್ತು ಎಲ್ಲಾ ವೀರನಾರಿಯರು ಪಾಲ್ಗೊಂಡು ಶುಭ ಕೋರಬೇಕೆಂದು ಸಂಘದ ಪ್ರಕಟಣೆಯಲ್ಲಿ ವಿನಂತಿಸಿದೆ.

5ನೇ ವಾರ್ಡ್‌ನಲ್ಲಿ ಸಚಿವ ಎಚ್.ಕೆ. ಪಾಟೀಲ ಪ್ರಚಾರ

# ಕಾಂಗ್ರೆಸ್ ಅಭ್ಯರ್ಥಿಗೆ ಆಶೀರ್ವದಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದಲ್ಲಿ ಆಶ್ರಯ ಕಾಲೋನಿ, ನೇಕಾರ ಕಾಲೋನಿ ನಿರ್ಮಾಣವಾಗಲು ಕೆ.ಎಚ್. ಪಾಟೀಲ ಹಾಗೂ ಡಿ.ಆರ್. ಪಾಟೀಲರು ಕಾರಣ. ಚುನಾವಣೆಗೆ ಬಂದಾಗ, ನಮ್ಮನ್ನು ಹೊರಗಿಟ್ಟವರಿಗೂ ಈ ಬಾರಿ ತಿಳಿವಳಿಕೆ ಹೇಳಿ, ಮನೆ-ಮನೆಗೆ ಗ್ಯಾರಂಟಿ ಕಾರ್ಡ್‌ಗಳನ್ನು ತಲುಪಿಸಿ ಈ ಬಾರಿ ಕಾಂಗ್ರೆಸ್ ಅಭ್ಯರ್ಥಿಗೆ ಪೂರ್ಣ ಪ್ರಮಾಣದ ಆಶೀರ್ವಾದ ಮಾಡಬೇಕು ಎಂದು ಸಚಿವ ಎಚ್.ಕೆ. ಪಾಟೀಲ ಮನವಿ ಮಾಡಿದರು.

ನಗರದ 5ನೇ ವಾರ್ಡಿನಲ್ಲಿ ಹಾವೇರಿ-ಗದಗ ಲೋಕಸಭಾ



ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರ ಪ್ರಚಾರಾರ್ಥವಾಗಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಕೇಂದ್ರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಮಹಿಳೆಯರಿಗೆ 1 ಲಕ್ಷ ನೀಡುವುದಾಗಿ ಘೋಷಿಸಿದ್ದು, ಈ ಕುರಿತು ಗ್ಯಾರಂಟಿ ಕಾರ್ಡ್ ನೀಡುತ್ತಿದ್ದರೆ, ಗ್ಯಾರಂಟಿ ವಿರುದ್ಧ ಬಿಜೆಪಿ ಮುಖಂಡರು ಗ್ಯಾರಂಟಿ ವಿರುದ್ಧ ಕೋರ್ಟ್ ಮೆಟ್ಟಿಲೇರುತ್ತಿದ್ದಾರೆ. ಬಡವರಿಗೆ ದ್ರೋಹ ಮಾಡುತ್ತಿರುವ ಬಿಜೆಪಿಗೆ ಮತ ನೀಡದೇ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯನ್ನು ಆಯ್ಕೆ ಮಾಡಬೇಕು ಎಂದರು.

ಮಾಜಿ ಶಾಸಕ ಡಿ.ಆರ್. ಪಾಟೀಲ ಮಾತನಾಡಿ, 5ನೇ ವಾರ್ಡಿನಲ್ಲಿ ನೇಕಾರರು, ಕೂಲಿಕಾರ್ಮಿಕರು ಹಾಗೂ ಬಡವರು ಹೆಚ್ಚಿದ್ದು, ಈ ಬಾರಿ ಅಧಿಕ ಮತಗಳನ್ನು ನೀಡುವ ಮೂಲಕ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರ ಗೆಲುವಿಗೆ ಕಾರಣರಾಗಬೇಕು ಎಂದು ಹೇಳಿದರು.

ನಗರಸಭೆ ಮಾಜಿ ಸದಸ್ಯ ಅಶೋಕ ಬಣ್ಣದ ಮಾತನಾಡಿದರು. ಮುಖಂಡರಾದ ಪ್ರಭು ಬುರಬುರೆ, ಅಕ್ಬರಸಾಬ್ ಬಬರ್ಚಿ, ಮರ್ದಾನಸಾಬ್ ಕಾತರಕಿ, ಇಮಾಮ್‌ಸಾಬ್ ಬೋದ್ಲೇಖಾನ್, ಶಾಕೀರ್ ಕಾತರಕಿ, ನಾಗಲಿಂಗ ಐಲಿ, ಸುರೇಶ ಕಟ್ಟಿಮನಿ, ವೀರಪ್ಪ ನಾಯ್ಕರ, ಬಾಬು ನರಸಾಪೂರ, ಸಂಗಮೇಶ ಹಾದಿಮನಿ, ಬಾಲರಾಜ ಅರಬರ ಸೇರಿ ಅನೇಕರು ಇದ್ದರು.

# ದ್ವಿತೀಯ ಪಿ.ಯು.ಸಿ. ಫಲಿತಾಂಶದಲ್ಲಿ ಗಮನಾರ್ಹ ಸಾಧನೆ

■ ವಿಜಯಸಾಕ್ಷಿ ಸುದ್ದಿ, ಗದಗ

ದ್ವಿತೀಯ ಪಿಯುಸಿ ಪರೀಕ್ಷೆಯ ಮರು ಮೌಲ್ಯಮಾಪನ ಫಲಿತಾಂಶ ಪ್ರಕಟಗೊಂಡಿದ್ದು, ನಗರದ ಸರಕಾರಿ ಪ.ಪೂ. ಕಾಲೇಜಿನ ವಿದ್ಯಾರ್ಥಿಗಳು ವಿಶೇಷ ಸಾಧನೆ ಮಾಡಿದ್ದಾರೆ. ಕಲಾ ವಿಭಾಗದಲ್ಲಿ ಪವಿತ್ರಾ ಹೊಸಳ್ಳಿ (590), ಪ್ರೇಮಾಕವಲೂರ (589) ರಾಜ್ಯ ಮಟ್ಟದಲ್ಲಿ ಕ್ರಮವಾಗಿ 7 ಮತ್ತು 8ನೇ ರ್‍ಯಾಂಕ್ ಮತ್ತು ಶಬೀನಾ ಬಳ್ಳಾರಿ (585) ಜಿಲ್ಲಾ ಮಟ್ಟದಲ್ಲಿ ತೃತೀಯ ರ್‍ಯಾಂಕ್ ತಮ್ಮದಾಗಿಸಿಕೊಂಡು ಗಮನಾರ್ಹ ಸಾಧನೆಗೈದಿದ್ದಾರೆ.

ವಾಣಿಜ್ಯ ವಿಭಾಗದಲ್ಲಿ ಮೆಹಕ್ ಮುಜಾವರ (578), ಸಹನಾ ಲಕ್ಕುಂಡಿಮಠ (568) ಮತ್ತು ಕಾವೇರಿ ಹಡಪದ (566) ಕಾಲೇಜು ಹಂತದಲ್ಲಿ ಕ್ರಮವಾಗಿ ಪ್ರಥಮ, ದ್ವಿತೀಯ ಮತ್ತು ತೃತೀಯ ರ್‍ಯಾಂಕ್ ಪಡೆದಿದ್ದಾರೆ.

ವಿಜ್ಞಾನ ವಿಭಾಗದಲ್ಲಿ ಆಯೇಷಾ ಬೇಗಂ ಮುಳಗುಂದ (579) ಮತ್ತು ಕಿರಣ ಗೌಡ ನಡಮನಿ (579) ಪ್ರಥಮ, ಬಸವರಾಜ ಬಾರಕೇರ (578) ಮತ್ತು ವಿನಯ ಖನ್ನೂರ (578) ದ್ವಿತೀಯ ಹಾಗೂ ಮುಸ್ಕಾನ್ ತಹಸೀಲದಾರ (576) ತೃತೀಯ ರ್‍ಯಾಂಕ್ ಪಡೆದಿದ್ದಾರೆ.

ಕಾಲೇಜಿನ ಒಟ್ಟು ಫಲಿತಾಂಶ ಶೇ. 99 ಆಗಿದ್ದು, ಕಲಾ ಶೇ.97.7, ವಾಣಿಜ್ಯ ಶೇ.100 ಮತ್ತು ವಿಜ್ಞಾನ ವಿಭಾಗದಲ್ಲಿ ಶೇ.98.9 ಫಲಿತಾಂಶ ದಾಖಲಾಗಿದೆ. ಪರೀಕ್ಷೆಗೆ ಹಾಜರಾದ 387 ವಿದ್ಯಾರ್ಥಿಗಳಲ್ಲಿ 383 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು, 161 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್‌ನಲ್ಲಿ ತೇರ್ಗಡೆಯಾಗಿದ್ದಾರೆ. ಸಾಧನೆಗೈದ ವಿದ್ಯಾರ್ಥಿಗಳನ್ನು ಕಾಲೇಜು ಅಭಿವೃದ್ಧಿ ಸಮಿತಿ ಅಧ್ಯಕ್ಷರು, ಸರ್ವ ಸದಸ್ಯರು, ಉಪ ನಿರ್ದೇಶಕರಾದ ಜಿ.ಎನ್. ಕುರ್ತಕೋಟಿ, ಪ್ರಾಚಾರ್ಯೆ ಪೂರ್ಣಿಮಾ ಹೊಸಮನಿ ಮತ್ತು ಉಪನ್ಯಾಸಕ ವೃಂದದವರು ಅಭಿನಂದಿಸಿ ಶುಭ ಹಾರೈಸಿದ್ದಾರೆ.

21ನೇ ವಾರ್ಡ್‌ನಲ್ಲಿ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಪರ ಸಚಿವ ಕೃಷ್ಣ ಬೈರೇಗೌಡ ಪ್ರಚಾರ

# ಬಡವರ ಹಣ ಶ್ರೀಮಂತರ ಪಾಲಾಗುತ್ತಿದೆ

■ ವಿಜಯಸಾಕ್ಷಿ ಸುದ್ದಿ, ಗದಗ

ನಿಮಗೆ ಗ್ಯಾರಂಟಿ ಉಳಿಯಬೇಕು, ಗ್ಯಾರಂಟಿ ಬೆಳೆಯಬೇಕು ಹಾಗೂ ರಾಜ್ಯದಲ್ಲಿ ಈಗಾಗಲೇ ನಿಮ್ಮ ಮನೆಗೆ ಬಂದಿರುವ ಗೃಹಲಕ್ಷ್ಮೀ, ಮುಂದಿನ ದಿನಗಳಲ್ಲಿ ಮಹಾಲಕ್ಷ್ಮೀಯಾಗಿ ಮನೆಗೆ ಬರಬೇಕು ಎಂದರೆ ಕಾಂಗ್ರೆಸ್‌ಗೆ ಆಶೀರ್ವಾದ ಮಾಡಿ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಮತದಾರರಲ್ಲಿ ಮನವಿ ಮಾಡಿದರು.

ನಗರದ 21ನೇ ವಾರ್ಡಿನ ಉಸಗಿನಗಟ್ಟಿ, ಯಲಿಗಾರ ಪ್ಲಾಟ್‌ನಲ್ಲಿ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರ ಪರವಾಗಿ ನಡೆದ ಪ್ರಚಾರ ಸಭೆಯಲ್ಲಿ ಅವರು ಮಾತನಾಡಿದರು.

ದೇಶದ ಬಡಜನತೆ ಹಗಲಿರುಳು ಕೆಲಸ ಮಾಡುತ್ತಿದ್ದಾರೆ. ಆದರೆ, ಅವರ ದುಡಿಮೆ ಮಾತ್ರ ಶ್ರೀಮಂತರ ಮನೆ ಸೇರುತ್ತಿದೆ. ಇತ್ತೀಚೆಗೆ ಶ್ರೀಮಂತರೊಬ್ಬರು ಮಗನ ವಿವಾಹ ನಿಶ್ಚಿತಾರ್ಥ ಕಾರ್ಯಕ್ರಮಕ್ಕೆ ಬರೊಬ್ಬರಿ 1,259 ಕೋಟಿ ರೂ. ಹಣವನ್ನು ಖರ್ಚು ಮಾಡಿದರು. ಮದುವೆಗೆ ಎಷ್ಟು ಖರ್ಚು ಮಾಡುತ್ತಾರೋ ಗೊತ್ತಿಲ್ಲ. ಅದು ಅವರು ಬೆವರು ಸುರಿಸಿದ ದುಡಿದ ದುಡ್ಡಾ ಎಂದು ಅವರು ಪ್ರಶ್ನಿಸಿದದರು.



ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಮಾತನಾಡಿ, ಸುಳ್ಳು, ಮೋಸ ಮಾಡುವ ಪ್ರವೃತ್ತಿ ಉಳ್ಳವರಿಗೆ ತಕ್ಕ ಶಾಸ್ತಿ ಮಾಡಬೇಕಿದೆ. ಕಳೆದ ಚುನಾವಣೆಯಲ್ಲಿ 21ನೇ ವಾರ್ಡಿನ ಮತದಾರರು ಕೇವಲ 51 ಮತಗಳ ಲೀಡ್ ಕೊಟ್ಟಿದ್ದೀರಿ. ಈ ಬಾರಿ ಕನಿಷ್ಠ 500 ಮತಗಳ ಲೀಡ್ ಕೊಡಲೇಬೇಕು. ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರಿಗೆ ವಿಶೇವಾಗಿ ಆಶೀರ್ವಾದ ಮಾಡಿ ಸಂಸತ್ತಿಗೆ ಕಳುಹಿಸಿಕೊಡಿ ಎಂದು ಮನವಿ ಮಾಡಿದರು.

ಶ್ರೀಮಂತರಿಗೆ ಕೋಟಿ ಕೋಟಿ ಸಾಲ ಮನ್ನಾ ಮಾಡಿದರೆ, ಶ್ರೀಮಂತರ ಆಸ್ತಿ ಜಾಸ್ತಿಯಾದರೆ ಅದು ಬಿಟ್ಟಿಭಾಗ್ಯ ಅಲ್ಲ. ಬೆವರು ಸುರಿಸಿ ದುಡಿದು ಸಂಸಾರ ನಡೆಸುವವರಿಗೆ, ಕಷ್ಟ ಪಡುವ ಸಾಮಾನ್ಯ ಜನರಿಗೆ ತಿಂಗಳಿಗೆ 5 ಸಾವಿರ ರೂ. ಕೊಟ್ಟರೆ ಅದು ಬಿಟ್ಟಿ ಭಾಗ್ಯ ಎಂದು ಗೇಲಿ ಮಾಡುತ್ತಿರುವರಿಗೆ ಮತದಾರರು ತಕ್ಕ ಪಾಠ ಕಲಿಸಬೇಕಿದೆ ಎಂದು ಹೇಳಿದರು.

ಮಾಜಿ ಶಾಸಕ ಡಿ.ಆರ್. ಪಾಟೀಲ, ನಗರಸಭೆ ಸದಸ್ಯ ಚಿಮ್ಮಿ ನದಾಫ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಮುಖಂಡರಾದ ರಾಮಣ್ಣ ಫಲದೊಡ್ಡಿ, ನಾಗಪ್ಪ ಗುಗ್ಗರಿ, ಶರಣಪ್ಪ ಅಬ್ಬಿಗೇರಿ, ಪರಪ್ಪ ಕಮತರ, ರಂಜಾನಸಾಬ್ ಅಣ್ಣಿಗೇರಿ, ಕಲಂದರಸಾಬ್ ಹುಬ್ಬಳ್ಳಿ, ಜಾಕೀರಸಾಬ್ ಕುನ್ನಿಬಾವಿ, ಪರಮೇಶಪ್ಪ ಜಂತ್ಲಿ, ಮಕ್ತುಂಸಾಬ್ ಹುಬ್ಬಳ್ಳಿ, ಅಬ್ದುಲ್ ಮುನಾಫ್ ಮುಲ್ಲಾ ಮುಂತಾದವರು ಇದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka